ಸಂಪುಟ : 9 ಸಂಚಿಕೆ 06 ಪುಟ : 4 ಬೆಲೆ : 3.00 ಗುರುವಾರ ಫೆಬ್ರವರಿ 1, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 06 Pages : 4 Price : 3.00 Thursday February 1, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 1ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22 ಕನ್ನಡ ಶಾಲೆ, ಎಲ್ಲಮ್ಮನ ಗುಡಿ, ಶುದ್ಧ ನೀರಿನ ಬಲಭಾಗ. ವಾರ್ಡ್ ನಂ. 30, 34– 46 ಪ್ಲಾಟ್, ಡಿಪೋ ಹಿಂದಿನ ಭಾಗ, ಮೂರು ಶಿಳ್ಳಿನ ವಕಾರ, ವಡ್ಡರಗೇರಿ, ಕುಂಚಿ ಕೊರವರ ಓಣಿ, ಗಾರ್ಡನ್ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 29 ರಾಜೀವ್ ಗಾಂಧಿ ನಗರ 1 ರಿಂದ 9 ನೇ ಕ್ರಾಸ್‌ವರೆಗೆ. ವಾರ್ಡ್ ನಂ. 24, 26 ಮಖಾನಗಲ್ಲಿ ಉಡಚಮ್ಮನ ಗುಡಿ ಲೈನ್, 76 ಪ್ಲಾಟ್, ತೆಗ್ಗಿನಲಾಟ್, ಅಬ್ಬಿಗೇರಿ ಕಾಂಪೌಂಡ್, ಸಾಲಮನೆ, ಕಮ್ಮಾರಸಾಲ, ಬನ್ನಿ ಮಹಾಕಾಳಿ ಗುಡಿ ರಸ್ತೆ, ಉರ್ದು ಶಾಲೆಯ ಹಿಂದಿನ ಭಾಗಗಳು. ವಾರ್ಡ್ ನಂ. 6 ನ್ಯಾವಳ್ಳಿಯವರ ಲೈನ್, ಮಾಕಾಪೂರ, ಮಿಸ್ಕಿನರವರ ಪ್ಲಾಟ್, ಪಿಪಿ ಗುಡಿ, ಈಶ್ವರ ಗುಡಿ ಲೈನ್. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ ಮೇಲಿನ ಭಾಗ– ಕೆಳಗಿನ ಭಾಗ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕೌಶಲ್ಯ ಆಧಾರಿತ ತರಬೇತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೆನರಾ ಬ್ಯಾಂಕ್ ದೇಶಪಾಂಡೆ ಆರ್ ಸೆಟ್ ತರಬೇತಿ ಸಂಸ್ಥೆಯಿಂದ 18ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ/ಯುವತಿಯರಿಗಾಗಿ ಫೆಬ್ರವರಿ ತಿಂಗಳ ಅಂತ್ಯದಲ್ಲಿ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕಾ ತರಬೇತಿ ಹಾಗೂ ಮಾರ್ಚ್ ತಿಂಗಳಲ್ಲಿ ಬ್ಯೂಟಿ ಪಾರ್ಲರ್ ಮ್ಯಾನೇಜ್‌ಮೆಂಟ್ ತರಬೇತಿಗಳು ಪ್ರಾರಂಭವಾಗಲಿವೆ. ಆಸಕ್ತ 18ರಿಂದ 45 ವಯಸ್ಸಿನವರು ತಮ್ಮ ಹೆಸರನ್ನು ನೋಂದಾಯಿಸಲು ಫೆಬ್ರವರಿ 15 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್ ಸೆಟ್ ಸಂಸ್ಥೆ ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಹಾಗೂ ದೂರವಾಣಿ ಸಂಖ್ಯೆ 9980510717, 9483485489ನ್ನು ಸಂಪರ್ಕಿಸಬಹುದಾಗಿದೆ.

### ತೋಟಗಾರಿಕಾ ವಿದ್ಯಾಲಯ ಸ್ಥಾಪನೆಗೆ ಸ್ಥಳ ಪರಿಶೀಲನೆ । ಆಶಾಭಾವ ವ್ಯಕ್ತಪಡಿಸಿದ ಶಾಸಕ ಜಿ.ಎಸ್. ಪಾಟೀಲ

# ತೋಟಗಾರಿಕಾ ಮಹಾವಿದ್ಯಾಲಯ ರೈತರಿಗೆ ವರದಾನ

■ವಿಜಯಸಾಕ್ಷಿ ಸುದ್ದಿ, ಡಂಬಳ

ಈ ಭಾಗದಲ್ಲಿ ಲಿಂ. ಡಾ.ತೋಂಟದ ಸಿದ್ದಲಿಂಗ ಶ್ರೀಗಳು ವ್ಯವಸಾಯ ಮತ್ತು ತೋಟಗಾರಿಕೆಗೆ ಬಗ್ಗೆ ಒತ್ತು ನೀಡಿ, ತಾವೇ ಸ್ವತಃ ದಾಳಿಂಬೆ, ಬಾರಿಹಣ್ಣು ಬೆಳೆದು ರೈತರಿಗೆ ಪ್ರೋತ್ಸಾಹ ನೀಡಿದ್ದರು. ಪೂರಕ ವಾತಾವರಣದಲ್ಲಿ ಶ್ರೀಗಳ ಪ್ರೇರಣೆಯ ಮೇರೆಗೆ ತೋಟಗಾರಿಕೆ ಮಹಾವಿದ್ಯಾಲಯ ಈ ಭಾಗದಲ್ಲಿ ಪ್ರಾರಂಭವಾದರೆ ಇಲ್ಲಿರುವ ಯುವ ರೈತರಿಗೆ, ವಿದ್ಯಾರ್ಥಿಗಳಿಗೆ ಅನುಕೂಲಕರವಾಗಲಿದೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಇಲ್ಲಿನ ಡಂಬಳ ಹೋಬಳಿ ಭಾಗದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ನಿರ್ಮಾಣಕ್ಕೆ ಸ್ಥಳ ಪರಿಶೀಲನೆಗೆ ಪ್ರೊ. ಎಸ್.ಬಿ. ದಂಡಿನ ನೇತೃತ್ವದಲ್ಲಿ ತೋಟಗಾರಿಕಾ ಇಲಾಖೆಯ ವಿಜ್ಞಾನಿಗಳು ಸ್ಥಳ ಸಮೀಕ್ಷೆಗೆ ಆಗಮಿಸಿದ ಸಂದರ್ಭದಲ್ಲಿ ರೈತರನ್ನು ಉದ್ದೇಶಿಸಿ ಶಾಸಕರು ಮಾತನಾಡಿದರು.

ಬಹಳ ವರ್ಷದ ನನ್ನ ಕನಸು, ಶ್ರೀಗಳ ಪ್ರೇರಣೆ ಯುವ ರೈತರ ಬೆಂಬಲಕ್ಕೆ ಸಹಕಾರಿಯಾಗಲಿದೆ. ಈ ಹಿನ್ನೆಲೆಯಲ್ಲಿ ತೋಟಗಾರಿಕಾ ಮಹಾವಿದ್ಯಾಲಯ ಪ್ರಾರಂಭಿಸಬೇಕು ಎನ್ನುವ ಉದ್ದೇಶದಿಂದ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಹಾಗೂ ನಾನು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೆವು. ಸಮಿತಿಯವರು ಹಾಗೂ ವಿಜ್ಞಾನಿಗಳು ಸಮೀಕ್ಷೆ ನಡೆಸಲು ಆಗಮಿಸಿದ್ದಾರೆ. ಈ ಭಾಗದಲ್ಲಿ ರೈತರು ಪೇರಲ, ಜವಾರಿ ಬಾರೆಹಣ್ಣು, ಅಡಕೆ, ಲಿಚಿ, ಡ್ರ್ಯಾಗನ್, ಮಾವು, ತೆಂಗು, ಬಾಳೆ, ಲಿಂಬೆ, ನೆರಲೆ ಹಣ್ಣು, ಚಿಕ್ಕು, ಪಪ್ಪಾಯಿ, ಈರುಳ್ಳಿ, ಮೆಣಸಿನಕಾಯಿ



ಸೇರಿದಂತೆ ಹಲವಾರು ತೋಟಗಾರಿಕಾ ಬೆಳೆಗಳನ್ನು ಬೆಳೆದು ಯುವ ರೈತರು ಸಫಲರಾಗಿದ್ದಾರೆ.

ಸಿಂಗಟಾಲೂರ ಏತ ನೀರಾವರಿ ಆಧಾರದಿಂದ 3 ಸಾವಿರ ಎಕರೆಗೂ ಹೆಚ್ಚು ಪ್ರದೇಶದಲ್ಲಿ ಉತ್ತಮ ಬೆಳೆ ಪಡೆಯಲಾಗುತ್ತಿದೆ. ಅಲ್ಲದೆ ತಾಮ್ರಗುಂಡಿ ಕೆರೆ, ಪೇಠಾ ಆಲೂರ ಕೆರೆ, ಜಂತ್ಲಿ ಶಿರೂರ ಕೆರೆ ಸೇರಿದಂತೆ ಈ ಭಾಗದ ಎಲ್ಲಾ ಕೆರೆಗಳ ಮೂಲಕ ಮತ್ತು ಬೋರ್‌ವೆಲ್‌ಗಳ ಮೂಲಕ ರೈತರು ನೀರಾವರಿಗೂ ಉತ್ತಮ ಅವಕಾಶ ಹೊಂದಿದ್ದಾರೆ.

ಈ ಸಂದರ್ಭದಲ್ಲಿ ಬಾಗಲಕೋಟೆ ತೋಟಗಾರಿಕಾ ವಿಶ್ವವಿದ್ಯಾಲಯಯದ ಡೀನ್ ಡಾ.ರವೀಂದ್ರ ಮುಲಗೆ, ಧಾರವಾಡದ ಕೃಷಿ ವಿಶ್ವವಿದ್ಯಾಲಯದ ನಿರ್ದೇಶಕ ಡಾ. ಎಸ್.ಎಸ್. ಅಂಗಡಿ, ತಾಂತ್ರಿಕ ಸಲಹೆಗಾರ ಅಜಯಕುಮಾರ ದಪ್ಪತ್ತರದಾರ, ಮುಂಡರಗಿ ತೋಟಗಾರಿಕೆ ನಿರ್ದೇಶಕ ಎಮ್. ಎಮ್. ತಾಂಬೋಟಿ, ಕಂದಾಯ ಅಧಿಕಾರಿ ಪ್ರಭು ಬಾಗಲಿ, ರೈತರಾದ ಗೋಣಿಬಸಪ್ಪ ಕೋರ್ಲಹಳ್ಳಿ, ವಿ.ಟಿ. ಮೇಟಿ, ವಿ.ಎಸ್. ಯರಾಶಿ, ಮಹೇಶ ಗಡಗಿ, ಸೋಮಣ್ಣ ಗುಡ್ಡದ, ಬಸುರಡ್ಡಿ ಬಂಡಿಹಾಳ, ಸಿದ್ದಪ್ಪ ನಂಜಪ್ಪನವರ, ಮರಿಯಪ್ಪ ಸಿದ್ದಣ್ಣವರ, ಬಸುರಾಜ ಪೂಜಾರ, ಸುರೇಶ ಗಡಗಿ, ಜಾಕೀರ ಮೂಲಿಮನಿ, ಸಿದ್ದಪ್ಪ ಹಡಪದ, ಕುಬೇರಪ್ಪ ಕೊಳ್ಳಾರ, ಬಾಬು ಮೂಲಿಮನಿ, ಬಾಬುಸಾಬ ಸರಕಾವಾಸ, ಮಾರುತಿ ಹೊಂಬಳ ಮುಂತಾದವರಿದ್ದರು.

> ಈ ಭಾಗದಲ್ಲಿ ತೋಟಗಾರಿಕಾ ಮಹಾವಿದ್ಯಾಲಯ ಪ್ರಾರಂಭವಾದರೆ ವಿದ್ಯಾರ್ಥಿಗಳಿಗೆ ಪೂರಕ ವಾತಾವರಣ ಮತ್ತು ಈ ಭಾಗದ ಯುವ ರೈತರಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಲಿದೆ. ಇದಕ್ಕೆ ಅಗತ್ಯವಿರುವ 60 ಎಕರೆ ಭೂಮಿಯನ್ನು ಕೊಡಲು ನಾವು ಸಿದ್ಧರಿದ್ದು, ತೋಟಗಾರಿಕಾ ಮಹಾವಿದ್ಯಾಲಯವನ್ನು ತೆರೆಯಲು ಸರ್ಕಾರ ಅನುಮತಿ ನೀಡುತ್ತದೆಯೆನ್ನುವ ಆಶಾಭಾವವಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.



## ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವರಿಂದ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಖನಿಜ ನಿಗಮದ ಅಧ್ಯಕ್ಷರ ಹುದ್ದೆ ಅಲಂಕರಿಸಿದ್ದಕ್ಕಾಗಿ ರೋಣ ಶಾಸಕ ಜಿ.ಎಸ್. ಪಾಟೀಲರ ನಿವಾಸಕ್ಕೆ ತೆರಳಿ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಅಭಿನಂದನೆ ಸಲ್ಲಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಗಣ್ಯರಾದ ಬಿ.ಬಿ. ಅಸೂಟಿ, ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಪ್ರಭು ಬುರಬುರೆ, ಅಶೋಕ ಮಂದಾಲಿ ಮುಂತಾದವರಿದ್ದರು.

### ವಾ.ಕ.ರ.ಸಾ.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಎಸ್.ಭರತ್ ಸೂಚನೆ

# ಪ್ರಯಾಣಿಕರಿಗೆ ಸೌಲಭ್ಯ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಸ್ ನಿಲ್ದಾಣದ ಸ್ವಚ್ಛತೆ ಹಾಗೂ ಪ್ರಯಾಣಿಕರಿಗೆ ಮೂಲಭೂತ ಸೌಲಭ್ಯ ಒದಗಿಸಬೇಕೆಂದು ವಾ.ಕ.ರ.ಸಾ.ಸಂಸ್ಥೆಯ ವ್ಯವಸ್ಥಾಪಕರ ನಿರ್ದೇಶಕ ಎಸ್. ಭರತ್ ಸೂಚಿಸಿದರು.

ಅವರು ಗದಗ ವಿಭಾಗಕ್ಕೆ ಭೇಟಿ ನೀಡಿ, ಗದಗ ವಿಭಾಗದ ಕಾರ್ಯಾಚರಣೆ ಹಾಗೂ ಕಾಮಗಾರಿ ಪ್ರಗತಿ ಪರಿಶೀಲನೆ, ಫೆಬ್ರವರಿ 3ರಂದು ಗದಗ ಹೊಸ ಬಸ್ ನಿಲ್ದಾಣದಲ್ಲಿ ಆಯೋಜಿಸಿದ ನೂತನ ಬಸ್‌ಗಳ ಲೋಕಾರ್ಪಣೆ ಹಾಗೂ ಅಪಘಾತ ರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಣಾ ಕಾರ್ಯಕ್ರಮ ಕುರಿತು ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು.

ಪ್ರಸ್ತುತ ಶಕ್ತಿ ಯೋಜನೆ ಅನುಷ್ಠಾನದಲ್ಲಿದ್ದು, ವಾಹನಗಳ ಕಡೆಗೆ ಹೆಚ್ಚು ಗಮನ ಕೊಡಬೇಕು.

ಫೆಬ್ರವರಿ 3 ರಂದು ಗದಗ ಹೊಸ ಬಸ್ ನಿಲ್ದಾಣದಲ್ಲಿ ನಡೆಸಲು ಆಯೋಜಿಸಿದ ನೂತನ ಬಸ್ಸುಗಳ ಲೋಕಾರ್ಪಣೆ ಹಾಗೂ ಅಪಘಾತ ರಹಿತ ಚಾಲಕರಿಗೆ ಬೆಳ್ಳಿಪದಕ ವಿತರಣೆ ಹಾಗೂ UPI ವ್ಯವಸ್ಥೆ ಜಾರಿಗೊಳಿಸುವ ಕಾರ್ಯಕ್ರಮದಲ್ಲಿ ಸಚಿವರುಗಳು ಹಾಗೂ ಗಣ್ಯವ್ಯಕ್ತಿಗಳು ಆಗಮಿಸುತ್ತಿದ್ದು, ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಎಲ್ಲ ಅಧಿಕಾರಿಗಳಿಗೆ ಸೂಚಿಸಿದರು.

▸▸ 3ನೇ ಪುಟಕ್ಕೆ



> ಪ್ರಯಾಣಿಕರ ಉಪಯೋಗಕ್ಕಾಗಿ ಗದಗ–ಹುಬ್ಬಳ್ಳಿ ಮಾರ್ಗದಲ್ಲಿ ಹೊಸ ಇಲೆಕ್ಟ್ರಿಕ್ ವಾಹನಗಳನ್ನು ಕಾರ್ಯಾಚರಣೆ ಮಾಡಲು ಉದ್ದೇಶಿಸಲಾಗಿದ್ದು, ಬಸ್ ನಿಲ್ದಾಣಗಳಲ್ಲಿ ಚಾರ್ಜರ್ ಪಾಯಿಂಟ್‌ಗಳನ್ನು ಹಾಗೂ ಅದಕ್ಕೆ ಬೇಕಾಗುವ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಜನದಟ್ಟಣೆ ಅವಧಿಯಲ್ಲಿ ಸಾರ್ವಜನಿಕ ಪ್ರಯಾಣಿಕರಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೆಚ್ಚುವರಿ ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲು ಕ್ರಮ ಕೈಗೊಳ್ಳಬೇಕು. ಫೆಬ್ರವರಿ ಹಾಗೂ ಮಾರ್ಚ್ ತಿಂಗಳಾಂತ್ಯದೊಳಗೆ ಗದಗ ವಿಭಾಗಕ್ಕೆ 40 ಹೊಸ ವಾಹನಗಳನ್ನು ಹಂತ ಹಂತವಾಗಿ ಪೂರೈಕೆ ಮಾಡಲಾಗುವದು. ಸೂಕ್ತ ಮಾರ್ಗದಲ್ಲಿ ಕಾರ್ಯಾಚರಣೆಗೆ ಯೋಜನೆ ರೂಪಿಸಿ.
>
> **– ಎಸ್.ಭರತ್**, ವ್ಯವಸ್ಥಾಪಕ ನಿರ್ದೇಶಕರು, ವಾ.ಕ.ರ.ಸಾ.ಸಂಸ್ಥೆ.

### ಮುಂಬೈನ ಚೈತ್ಯಭೂಮಿಯಲ್ಲಿ ಭೀಮಮಂದಿರ ನಿರ್ಮಾಣದ ಅಮೃತ ಘಳಿಗೆ ಶೀಘ್ರವೇ ಒದಗಿಬರಲಿ

# ರಾಮ ಮಂದಿರವಾಯ್ತು, ಭೀಮ ಮಂದಿರವನ್ನೂ ನಿರ್ಮಿಸಿ



**– ಅನಿಲ್ ಪಿ. ಮೆಣಸಿನಕಾಯಿ.**

ಅಂದು ದೇಶಾದ್ಯಂತ ಜಾರಿಯಲ್ಲಿದ್ದ ಅನಿಷ್ಟ ಪದ್ಧತಿ ಗಳಲ್ಲೊಂದಾದ ಅಸ್ಪೃಶ್ಯತೆಯನ್ನು ತೊಡೆದು ಹಾಕುವ ನಿಟ್ಟಿನಲ್ಲಿ 1930ರಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಿ.ಕೆ. ಗಾಯಕವಾಡ್ ಅವರ ನೇತೃತ್ವದಲ್ಲಿ ನಡೆದ ಹೋರಾಟದ ಸಂದರ್ಭದಲ್ಲಿ ಅಂಬೇಡ್ಕರ್ 'ರಾಮ ತನ್ನ ನಡವಳಿಕೆ, ಸಭ್ಯತೆಯಿಂದ ದೊಡ್ಡವನಾದ. ಶಬರಿ ಕೊಟ್ಟ ಎಂಜಲು ಹಣ್ಣನ್ನು ಪ್ರಸಾದವೆಂದು ಸ್ವೀಕರಿಸಿದ. ಆದರೆ, ರಾಮನನ್ನು ಆರಾಧಿಸುವವರು ರಾಮನ ನಡವಳಿಕೆ ಮತ್ತು ಸಭ್ಯತೆಯನ್ನು ಮರೆಯುತ್ತಾರೆ. ಈ ಮಾನಸಿಕತೆಯ ಪರಿವರ್ತನೆಯೇ ಕಾಳರಾಮ ಮಂದಿರ ಪ್ರವೇಶದ ಗುರಿ' ಎಂದಿದ್ದರಂತೆ. ಆದರೆ, ಅಯೋಧ್ಯೆಯ ಅದೇ ರಾಮಮಂದಿರ ನಿರ್ಮಾಣಕ್ಕೆ ದಲಿತ ನಾಯಕ ಕಾಮೇಶ್ವರ ಚೌಪಾಲ್ ಶಿಲಾನ್ಯಾಸ ನೆರವೇರಿಸಿರುವುದು ಇತಿಹಾಸ.

ಅಂದು ಸಾವಿರಾರು ಸಂಖ್ಯೆಯಲ್ಲಿ ಅಸ್ಪೃಶ್ಯರು ಕಾಳರಾಮ ಮಂದಿರ ಪ್ರವೇಶ ಮಾಡಿದರೂ, ಇಂದಿಗೂ ಅಸ್ಪೃಶ್ಯತೆ ಎಂಬುದು ಜೀವಂತವಾಗಿದೆ. ಇದನ್ನೆಲ್ಲಾ ಗಮನವಾಗಿಟ್ಟುಕೊಂಡು, ಬಸವಣ್ಣನವರ ಸಮಾನತೆಯ ತತ್ವವನ್ನು ಪ್ರೇರಣೆಯಾಗಿಸಿಕೊಂಡು, ದೇಶದ ಪ್ರತಿಯೊಬ್ಬ ಪ್ರಜೆಯೂ ಗೌರವಯುತವಾಗಿ, ಸಮಾಜದಲ್ಲಿ ಸಮಾನತೆಯಿಂದ ಬದುಕಬೇಕೆಂಬ ನಿಟ್ಟಿನಲ್ಲಿ ಸಮಾನತೆ, ವ್ಯಕ್ತಿ ಸ್ವಾತಂತ್ರ್ಯ, ಭ್ರಾತೃತ್ವ, ಜಾತ್ಯಾತೀತ ತತ್ವಗಳ ಮೂಲಭೂತ ಆಶಯಗಳನ್ನು ಹೊಂದಿರುವ ಶ್ರೇಷ್ಠ ಸಂವಿಧಾನ ನೀಡಿದ ಕೀರ್ತಿ ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ.

ಅಂದಿನಿಂದ ಇಂದಿನವರೆಗೂ ಜಾತಿ ವ್ಯವಸ್ಥೆ, ಅಸ್ಪೃಶ್ಯತೆಯ ವಿರುದ್ಧದ ಹೋರಾಟಗಳು, ಸಮಾನತೆಯ ಕೂಗು ಕೇಳಿಬರುತ್ತಿರುವ ನಡುವೆಯೂ ತ್ರೇತಾಯುಗದ ರಾಮನ ಮಂದಿರ ನಿರ್ಮಾಣಕ್ಕಾಗಿ ನಡೆದ ಐದು

▸▸ 3ನೇ ಪುಟಕ್ಕೆ




> ಅಯೋಧ್ಯೆಯ ರಾಮಮಂದಿರ, ಬಸವಣ್ಣನ ಕೂಡಲಸಂಗಮದಂತೆ, ಅಂಬೇಡ್ಕರ್ ಅವರ ಜನ್ಮಸ್ಥಳ ಅಥವಾ ಚೈತ್ಯಭೂಮಿಯಲ್ಲಿ ಭೀಮಮಂದಿರ ನಿರ್ಮಾಣವಾಗಬೇಕು. ಅಂಬೇಡ್ಕರರನ್ನು ಕೇವಲ ಗಣರಾಜ್ಯೋತ್ಸವ, ಜಯಂತಿ, ಮಹಾಪರಿನಿರ್ವಾಣ ದಿನಗಳನ್ನು ಹೊರತುಪಡಿಸಿದರೆ ಬಹುತೇಕ ಇನ್ನುಳಿದ ದಿನದಲ್ಲಿ ನಾವ್ಯಾರೂ ಸ್ಮರಿಸುವುದೇ ಇಲ್ಲ. ಅಂಬೇಡ್ಕರರನ್ನು ಒಂದು ಜಾತಿ, ಜನಾಂಗಕ್ಕೆ ಸೀಮಿತಗೊಳಿಸಿಬಿಟ್ಟಿದ್ದೇವೆ. ವರ್ಷದ 365 ದಿನವೂ ಎಲ್ಲ ಧರ್ಮ, ಜಾತಿ– ಜನಾಂಗದ ಜನರು ಇಲ್ಲಿಗೆ ಭೇಟಿ ನೀಡುವಂತಾಗಬೇಕು. ಅಂಬೇಡ್ಕರರ ಜೀವನ ಸಂದೇಶವನ್ನು ಜನರಿಗೆ ಅತ್ಯಂತ ಪರಿಣಾಮಕಾರಿಯಾಗಿ ಪರಿಚಯಿಸಬೇಕೆಂದರೆ ಪ್ರಸ್ತುತ ದಿನಗಳಲ್ಲಿ ಭೀಮಮಂದಿರದ ಅಗತ್ಯವಿದೆ.
>
> **– ಚಂದ್ರಶೇಖರ್ ಹರಿಜನ.**
> ಸಾಮಾಜಿಕ ಹೋರಾಟಗಾರರು.



> ಭೀಮ ಮಂದಿರ ನಿರ್ಮಾಣವಾದರೆ ಈ ದೇಶದ ನಾಗರಿಕರಿಗೆ ಮತ್ತೊಮ್ಮೆ ಸ್ವಾತಂತ್ರ್ಯ ಸಿಕ್ಕಂತೆ. ಸಮಾನತೆ ಮತ್ತು ಸಮತೆಯ ತತ್ವಕ್ಕೆ ಜಯ ಸಿಕ್ಕಂತಾಗುತ್ತದೆ.
>
> **– ರವಿಕಾಂತ ಅಂಗಡಿ.**

## ಸಹಕಾರಿ ಧುರೀಣ ಶಾಂತಾರಾಮ ಹೆಗಡೆ ನಿಧನಕ್ಕೆ ಸಚಿವ ಎಚ್.ಕೆ. ಪಾಟೀಲ ಶೋಕ

■ವಿಜಯಸಾಕ್ಷಿ ಸುದ್ದಿ, ಗದಗ



ಹಿರಿಯ ಸಹಕಾರಿ ಧುರೀಣ, ಸಹಕಾರ ರತ್ನ ವಿಜೇತ ಶಾಂತಾರಾಮ ಹೆಗಡೆ ಶೀಗೆಹಳ್ಳಿ ಅವರ ನಿಧನಕ್ಕೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಶೋಕ ವ್ಯಕ್ತಪಡಿಸಿದ್ದಾರೆ.

ಶಿರಸಿಯ ತೋಟಗಾರಿಕೆ ಸೇಲ್ಸ್ ಸೊಸೈಟಿಯ ಅಧ್ಯಕ್ಷರಾಗಿ ಸತತ 25 ವರ್ಷಗಳ ಕಾಲ ಸೇವೆ ಸಲ್ಲಿಸಿ, ರಚನಾತ್ಮಕ ಕೆಲಸಗಳ ಮೂಲಕ ಸಹಕಾರ ಕ್ಷೇತ್ರದ ಗಮನ ಸೆಳೆದು ಮಾದರಿಯಾದವರು. ಉತ್ತರ ಕನ್ನಡ ಜಿಲ್ಲೆಯ ಡಿ.ಸಿ.ಸಿ. ಬ್ಯಾಂಕ್ ಅಧ್ಯಕ್ಷರಾಗಿ, ಮಾಡರ್ನ್ ಎಜ್ಯುಕೇಷನ್ ಸೊಸೈಟಿಯ ಅಧ್ಯಕ್ಷರಾಗಿ, ಸಹಕಾರಿ ಬ್ಯಾಂಕುಗಳ ನಿರ್ದೇಶಕರಾಗಿ ಶಾಂತಾರಾಮ ಹೆಗಡೆ ಅವರು ಅಚ್ಚಳಿಯದ ಸೇವೆ ಸಲ್ಲಿಸಿದ್ದಾರೆ. ಅವರ ಈ ಸೇವೆಗೆ ಸರಕಾರ ಅವರಿಗೆ ಸಹಕಾರ ರತ್ನ ಪ್ರಶಸ್ತಿ, ಗದುಗಿನ ಕೆ.ಎಚ್. ಪ್ರತಿಷ್ಠಾನ ನೀಡುವ ಪ್ರತಿಷ್ಠಿತ ಕೆ.ಎಚ್. ಪಾಟೀಲ ಪ್ರಶಸ್ತಿ ನೀಡಿ ಗೌರವಿಸಿದೆ.

ಸಹಕಾರ, ಶಿಕ್ಷಣ, ಗ್ರಾಮೀಣಾಭಿವೃದ್ಧಿ, ಧಾರ್ಮಿಕ, ಬ್ಯಾಂಕಿಂಗ್ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಶಾಂತಾರಾಮ ಹೆಗಡೆ ಅವರು ಅನುಪಮ ಸೇವೆ ಸಲ್ಲಿಸಿದ್ದಾರೆ. ಅವರ ನಿಧನದಿಂದಾಗಿ ನಾನು ಓರ್ವ ಹಿತೈಷಿಯನ್ನು ಹಾಗೂ ಸಮಾಜ ನಿಷ್ಠಾವಂತ ಸೇವಕನನ್ನು ಕಳೆದುಕೊಂಡಂತಾಗಿದೆ ಎಂದು ಸಚಿವರು ದುಃಖಿಸಿದ್ದಾರೆ.

ದೇವರು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ, ಅವರ ಅಗಲಿಕೆಯ ದುಃಖ ಸಹಿಸುವ ಶಕ್ತಿಯನ್ನು ಅವರ ಕುಟುಂಬ ಸದಸ್ಯರಿಗೆ, ಬಂಧುಗಳಿಗೆ ನೀಡಲಿ ಎಂದು ಸಚಿವ ಎಚ್.ಕೆ. ಪಾಟೀಲ ದೇವರಲ್ಲಿ ಪ್ರಾರ್ಥಿಸಿದ್ದಾರೆ.

## ಶ್ರೀ ಶಿವಶಾಂತವೀರ ಶರಣರ ಸದ್ಭಾವನಾ ಪಾದಯಾತ್ರೆ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 29ನೇ ಪುಣ್ಯ ಸ್ಮರಣೋತ್ಸವ, ಜಾತ್ರಾ ಮಹೋತ್ಸವ, ಮಹಾರಥೋತ್ಸವ ಫೆಬ್ರುವರಿ 16ರಂದು ಜರುಗಲಿದ್ದು, ತನ್ನಿಮಿತ್ತ ಶ್ರೀ ಶಿವಶಾಂತವೀರ ಶರಣರಿಂದ ವಿವಿಧ ಗ್ರಾಮಗಳಲ್ಲಿ ಸದ್ಭಾವನಾ ಪಾದಯಾತ್ರೆ ಹೊಂಬಳದ ಶ್ರೀ ಚನ್ನವೀರಶರಣರ ಭಜನಾ ಸೇವಾ ಸಂಘದ ತಂಡದೊಂದಿಗೆ ಫೆ.2ರಿಂದ 8ರವರೆಗೆ ಜರುಗುವುದು.

ಫೆ.2ರಂದು ಬೆಳಿಗ್ಗೆ 6 ಗಂಟೆಗೆ ರೋಣ ತಾಲೂಕ ಕುರಡಗಿ ಗ್ರಾಮ, ಫೆ.3ರಂದು ಬೆಳಿಗ್ಗೆ 6 ಗಂಟೆಗೆ ಬೆಳವಣಕಿ, ಫೆ.4ರಂದು ಬೆಳಿಗ್ಗೆ 6 ಗಂಟೆಗೆ ಕಿರಟಗೇರಿ ಗ್ರಾಮ, ಫೆ.5ರಂದು ಬೆಳಿಗ್ಗೆ 6 ಗಂಟೆಗೆ ಡ.ಸ. ಹಡಗಲಿ ಹಾಗೂ ಸಾಯಂಕಲ 5 ಗಂಟೆಗೆ ಚಿಕ್ಕಮಣ್ಣೂರ ಗ್ರಾಮ, ಫೆ.6ರಂದು ಬೆಳಿಗ್ಗೆ 6 ಗಂಟೆಗೆ ಹಿರೇಕೊಪ್ಪ ಗ್ರಾಮ, ಫೆ.7 ಮತ್ತು 8ರಂದು ಬೆಳಿಗ್ಗೆ 6 ಗಂಟೆಗೆ ಬಳಗಾನೂರ ಗ್ರಾಮದಲ್ಲಿ ಸದ್ಭಾವನಾ ಪಾದಯಾತ್ರೆ ಜರುಗುವುದು. ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಶ್ರೀಮಠದ ಪ್ರಕಟಣೆ ಕೋರಿದೆ.

## ಬಿ.ಇಡಿ ಕೋರ್ಸಿನ ದಾಖಲಾತಿ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪರಿಶೀಲನೆಗೆ ದಾಖಲಾತಿ ಪರಿಶೀಲನೆ ಮತ್ತು ಪ್ರವೇಶ ಪ್ರಕ್ರಿಯೆಯ ಮೂರನೇ ಪಟ್ಟಿಯಲ್ಲಿ ಸೀಟು ಪಡೆದ ಅಭ್ಯರ್ಥಿಗಳಿಗೆ ಪ್ರವೇಶಾತಿ ಪತ್ರ ನೀಡಲು ಫೆಬ್ರವರಿ 1 ಕೊನೆಯ ದಿನವಾಗಿರುತ್ತದೆ. ಹಾಗೂ 4ನೇ ಸುತ್ತಿನ ದಾಖಲೆಗಳ ಪರಿಶೀಲನೆಗೆ ದಿನಾಂಕ ಫೆಬ್ರವರಿ 3 ಕೊನೆಯ ದಿನವಾಗಿರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕಳಸಾಪುರ ರೋಡ ಗದಗ ಇಲ್ಲಿ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ಝರಾಕ್ಸ್ ಪ್ರತಿಯೊಂದಿಗೆ ಹಾಜರಾಗಿ ದಾಖಲೆಗಳ ಪರಿಶೀಲನೆ ಮಾಡಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in ಜಾಲತಾಣವನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಮತ್ತು ತರಬೇತಿ ಸಂಸ್ಥೆ ಯನ್ನು ಸಂಪರ್ಕಿಸಬಹುದಾಗಿದೆ.

### ತೋಂಟದಾರ್ಯ ಕನ್ನಡ, ಆಂಗ್ಲ ಮಾಧ್ಯಮ ಶಾಲೆಯ 'ಪ್ರತಿಭಾ ಸಂಭ್ರಮ'ದ ನಿಮಿತ್ತ ಲೇಖನ

# ಜ್ಞಾನದೇಗುಲದಲ್ಲಿ ಮಕ್ಕಳ ಪ್ರತಿಭಾ ಸಿಂಚನ

'ಶಾಲಾ–ಕಾಲೇಜುಗಳು ಆಧುನಿಕ ದಿನಮಾನದ ದೇವಾಲಯಗಳು' ಎಂಬ ಅಮರವಾಣಿ ನೀಡಿದ ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಗುಣಮಟ್ಟದ ಶಿಕ್ಷಣದ ಮೂಲಕ ಸಾಮಾಜಿಕ ಪರಿವರ್ತನೆ ಸಾಧ್ಯವೆಂದು ಗಟ್ಟಿಯಾಗಿ ನಂಬಿದ್ದವರು. ಅವರ ಧ್ಯೇಯಗಳ ದಿವ್ಯ ಪ್ರಕಾಶದಲ್ಲಿ ಬೆಳಗುತ್ತಿರುವ ಶ್ರೀಮಠದ ಹಲವಾರು ವಿದ್ಯಾಕೇಂದ್ರಗಳಲ್ಲಿ ಜಗದ್ಗುರು ತೋಂಟದಾರ್ಯ ಶಿಕ್ಷಣ ಸಂಸ್ಥೆ ಅಗ್ರ ಗಣ್ಯವಾಗಿದೆ.

ಸರ್ವಜನಾಂಗಗಳ, ಎಲ್ಲಾ ಸ್ತರದ ಮಕ್ಕಳು ಉತ್ತಮ ಶಿಕ್ಷಣ ಪಡೆದು ಉನ್ನತ ಭವಿಷ್ಯ ಕಟ್ಟಿಕೊಳ್ಳಬೇಕೆಂಬ ಲಿಂಗೈಕ್ಯ ಶ್ರೀಗಳ ಮಹದುದ್ದೇಶದಿಂದ 1978ರಲ್ಲಿ ತೋಂಟದಾರ್ಯ ಪೂರ್ವ ಪ್ರಾಥಮಿಕ ಶಾಲೆಯನ್ನು ಆರಂಭಿಸಲಾಯಿತು. ಅಂದಿನಿಂದ 'ಶರಣು ಬನ್ನಿ' ಎಂಬ ಬಸವಾದಿ ಶರಣರ ಧ್ಯೇಯವಾಕ್ಯದ ಮೂಲಕ ವಿದ್ಯಾರ್ಥಿಗಳನ್ನು ಸ್ವಾಗತಿಸುತ್ತಾ, ಸತತ ನಾಲ್ಕು ದಶಕಗಳಿಂದ ಶಿಕ್ಷಣ ದಾಸೋಹ ನೀಡುತ್ತಿರುವ ಜಗದ್ಗುರು ತೋಂಟದಾರ್ಯ ಶಿಕ್ಷಣ ಸಂಸ್ಥೆ ಸಮಾಜಕ್ಕೆ ಸಾವಿರಾರು ಸಾತ್ವಿಕ ನಾಗರಿಕರನ್ನು ಕೊಡುಗೆಯಾಗಿ ನೀಡಿದೆ.

ಶಾಲೆ ಅಭಿವೃದ್ಧಿಗೊಳ್ಳುತ್ತಾ ಸಾಗಿದಂತೆ ತೋಂಟದಾರ್ಯ ಶಿಶುಮಂದಿರ, ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಗಳೂ ಆರಂಭವಾಗಿ ಮೌಲ್ಯಯುತ ಶಿಕ್ಷಣ ನೀಡುವ ಗುರುತರ ಜವಾಬ್ದಾರಿ ಹೊತ್ತುಕೊಂಡಿವೆ. ಮಕ್ಕಳು ಸಮರ್ಥ ನಾಗರಿಕರಾಗಿ ಬೆಳೆಯುವ ನಿಟ್ಟಿನಲ್ಲಿ ಬಾಲ್ಯಾವಸ್ಥೆಯಿಂದಲೇ ಅವರ ಪ್ರತಿಭೆಗಳನ್ನು ಗುರುತಿಸಿ, ಅವರ ಆಸಕ್ತಿಗನುಗುಣವಾಗಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಶಾಲೆಯು ಹಲವಾರು ಮಾರ್ಗಗಳನ್ನು ತೆರೆದಿಟ್ಟಿದೆ. ಶಾಲೆಯ ನಿರಂತರ ಪ್ರಗತಿ ಮತ್ತು ಸಾಧನೆಗೆ ಪೂಜ್ಯ ಲಿಂಗೈಕ್ಯ ತೋಂಟದ ಸಿದ್ಧಲಿಂಗ ಶ್ರೀಗಳ ದಿವ್ಯ ಪ್ರಕಾಶ, ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಮಾರ್ಗದರ್ಶನ ಹಾಗೂ ಸಂಸ್ಥೆಯ ಚೇರಮನ್ ಎಸ್.ಎಸ್. ಪಟ್ಟಣಶೆಟ್ಟರ ಕರ್ತೃತ್ವ ಶಕ್ತಿ, ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿಯವರ ದಣಿವರಿಯದ ಶ್ರಮ ಸಾಥ್ ನೀಡಿವೆ.



ಸಂಸ್ಥೆಯ ಹಿಂದಿನ ಚೇರಮನ್‌ರಾಗಿದ್ದ ಲಿಂ. ದಾನಪ್ಪ ತಡಸದ ಹಾಗೂ ಮಾರ್ಗದರ್ಶಕರಾಗಿದ್ದ ದಿ. ಹಂಚಿನಾಳ ಗುರುಗಳ ಸೇವೆಯೂ ಅವಿಸ್ಮರಣೀಯ. ಪಿ.ಎಸ್. ಸಂಶಿಮಠ ಅವರು ಹಾಗೂ ಸಂಸ್ಥಾಪಕ ಚೇರಮನ್ನರಾಗಿ ರಾಷ್ಟ್ರಪ್ರಶಸ್ತಿ ಪಡೆದ ದಿ.ವಿ.ವಿ. ಗಡಾದ ಗುರುಗಳು ಈ ಜ್ಞಾನ ದೇಗುಲಕ್ಕೆ ಮಾನವೀಯ ಮೌಲ್ಯಗಳ ತಳಹದಿಯನ್ನು ಹಾಕಿ ಗಟ್ಟಿಗೊಳಿಸಿದ್ದಾರೆ. ಶಾಲೆಯು ಬೃಹತ್ ಸುಸಜ್ಜಿತ ಕಟ್ಟಡ, ವಿಶಾಲ ಆಟದ ಮೈದಾನ, ಆಧುನಿಕ ಕಂಪ್ಯೂಟರ್ ಲ್ಯಾಬ್, ವಿಜ್ಞಾನ ಪ್ರಯೋಗಾಲಯ, ಜ್ಞಾನಾರ್ಜನೆ ನೀಡುವ ಗ್ರಂಥಾಲಯ, ಇತ್ತೀಚೆಗೆ ಉದ್ಘಾಟನೆಗೊಂಡ ಜೆ.ಟಿ. ಅಟಲ್ ಟಿಂಕರಿಂಗ್ ಲ್ಯಾಬ್ ಸೇರಿದಂತೆ ಕಲಿಕೆಗೆ ಪೂರಕವೆನಿಸುವ ಎಲ್ಲಾ ಅಂಶಗಳನ್ನು ಒಳಗೊಂಡಿದೆ.

ಶಾಲೆಯಲ್ಲಿ ಉತ್ತೀರ್ಣರಾದ ಅನೇಕ ವಿದ್ಯಾರ್ಥಿಗಳು ನವೋದಯ, ಸೈನಿಕ ಶಾಲೆ ಸೇರಿ ರಾಷ್ಟ್ರಮಟ್ಟದಲ್ಲಿ ಹೆಸರು ಗಳಿಸಿದ ಅನೇಕ ನಿದರ್ಶನಗಳಿವೆ. ಮಕ್ಕಳಲ್ಲಿ ಕೃತಕ ವ್ಯಕ್ತಿತ್ವವನ್ನು ಮೂಡಿಸಿ ಅವರನ್ನು ಕೇವಲ ಅಂಕ ಗಳಿಕೆಯ ಯಂತ್ರಗಳನ್ನಾಗಿಸದೇ ಅವರಲ್ಲಿ ಶಿಸ್ತು, ಸಂಯಮ, ಕಾಯಕನಿಷ್ಠೆ–ಬದ್ಧತೆಯಂತಹ ಉದಾತ್ತ ಗುಣಗಳನ್ನು ಬೆಳೆಸಲು ಸಂಸ್ಥೆ 60ಕ್ಕೂ ಹೆಚ್ಚು ಸಿಬ್ಬಂದಿಗಳನ್ನು ಹೊಂದಿ ಕಟಿಬದ್ಧವಾಗಿದೆ.

ಅತ್ಯುತ್ತಮ ಫಲಿತಾಂಶ: ಪ್ರತಿವರ್ಷ ಎಸ್.ಎಸ್.ಎಲ್.ಸಿ.ಯಲ್ಲಿ ಶೇ.100ರಷ್ಟು ಫಲಿತಾಂಶವನ್ನು ಕನ್ನಡ ಮತ್ತು ಆಂಗ್ಲ ಮಾಧ್ಯಮದ ವಿದ್ಯಾರ್ಥಿಗಳು ಪಡೆಯುತ್ತಾ ಬಂದಿರುವುದು ಶಾಲೆಯ ಎಲ್ಲಾ ಸಿಬ್ಬಂದಿಗಳ ಮಾರ್ಗದರ್ಶನಕ್ಕೆ ಸಾಕ್ಷಿಯಾಗಿದೆ. 2023–24ನೇ ಸಾಲಿನಲ್ಲೂ ಶಾಲೆಯ ದಾಖಲೆ ಮುಂದುವರೆದಿದೆ. ಆರ್ಥಿಕವಾಗಿ ಸದೃಢರಲ್ಲದ ಮಕ್ಕಳು ಸಹ ಎಸ್‌ಎಸ್‌ಎಲ್‌ಸಿಯಲ್ಲಿ ಅತೀ ಹೆಚ್ಚು ಫಲಿತಾಂಶ ಪಡೆಯುತ್ತಿದ್ದು, ಮೊದಲ ಸ್ಥಾನದಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಶ್ರೀಮಠದ ಇತರೆ ಸಂಸ್ಥೆಗಳಲ್ಲಿ ಉಚಿತವಾಗಿ ಪ್ರವೇಶ ನೀಡಲಾಗುತ್ತಿದೆ.

ನೂತನ ಶಾಲಾ ಕಟ್ಟಡದ ಶಂಕುಸ್ಥಾಪನೆ: ನಗರದ ಪಿ.ಬಿ. ರಸ್ತೆಗೆ ಹೊಂದಿಕೊಂಡಿರುವ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ನಿವೇಶನದಲ್ಲಿ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 5ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ತೋಂಟದಾರ್ಯ ಕನ್ನಡ ಮಾಧ್ಯಮ ಪ್ರೌಢಶಾಲೆಯ ನೂತನ ಕಟ್ಟಡದ ಶಂಕು ಸ್ಥಾಪನೆಯನ್ನು ವಿ.ಪ ಸಭಾಪತಿ ಬಸವರಾಜ ಹೊರಟ್ಟಿಯವರು ನೆರವೇರಿಸಿದ್ದಾರೆ.

ಕ್ರೀಡೆಯಲ್ಲಿ ರಾಜ್ಯ–ರಾಷ್ಟ್ರಮಟ್ಟದಲ್ಲಿ ಸಾಧನೆ: ಶಾಲೆಯ 10ನೇ ತರಗತಿ ಆಂಗ್ಲ ಮಾಧ್ಯಮದ ವಿದ್ಯಾರ್ಥಿನಿ ಭುವನೇಶ್ವರಿ ಕೋಳಿವಾಡ ಕುಸ್ತಿ ಪಂದ್ಯಾವಳಿಯಲ್ಲಿ ಮೊದಲು ತಾಲೂಕು, ಜಿಲ್ಲಾ ಆ ನಂತರ ರಾಜ್ಯಮಟ್ಟದಲ್ಲಿ ವಿಜೇತಳಾಗಿದ್ದು ಚನ್ನೈನಲ್ಲಿ ನಡೆದ ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಕುಸ್ತಿ ಪಂದ್ಯಾವಳಿಯಲ್ಲಿ ತೃತೀಯ ಸ್ಥಾನ ಪಡೆದಿದ್ದು, ರಾಷ್ಟ್ರೀಯ ಮಟ್ಟದಲ್ಲಿ ತೋಂಟದಾರ್ಯ ಶಾಲೆಯ ಕೀರ್ತಿಪತಾಕೆಯನ್ನು ಹಾರಿಸಿದ್ದಾಳೆ. ಇದಲ್ಲದೇ ಶಾಲೆಯ ವಿದ್ಯಾರ್ಥಿಗಳಾದ ವೈಷ್ಣವಿ ಇಮ್ಮಡಿಯವರ, ರಾಹುಲ್ ಸಿದ್ಧಮ್ಮನಹಳ್ಳಿ ಕುಸ್ತಿ ಪಂದ್ಯಾಟದಲ್ಲಿ ಜಿಲ್ಲಾ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ.

ಹೀಗೆ ವರ್ಷದುದ್ದಕ್ಕೂ ಪಠ್ಯ–ಪಠ್ಯೇತರ ಚಟುವಟಿಕೆಗಳನ್ನು ಯಶಸ್ವಿಯಾಗಿ ನಡೆಸಿರುವ ವಿದ್ಯಾರ್ಥಿಗಳು ಫೆ.1 ಹಾಗೂ 2ರಂದು ಜರುಗುವ ಮಕ್ಕಳ ಪ್ರತಿಭಾ ಸಂಭ್ರಮ ಕಾರ್ಯಕ್ರಮದಲ್ಲಿ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳನ್ನು ಪ್ರದರ್ಶಿಸಲಿದ್ದು, ಪಾಲಕರು ಹಾಗೂ ಅತಿಥಿಗಳಿಗೆ ವಿದ್ಯಾರ್ಥಿಗಳು ಹಾರ್ದಿಕ ಸ್ವಾಗತ ಕೋರಿದ್ದಾರೆ.

**– ವೀರೇಶ .ಎಂ. ಹರ್ಲಾಪೂರ.**

## ಬೃಹತ್ ಸೌಹಾರ್ದತಾ ಮಾನವ ಸರಪಳಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಈ ದೇಶದ ಸ್ವಾತಂತ್ರ್ಯ, ಭಾವೈಕ್ಯತೆ, ಮಾನವ ಸಂಬಂಧಗಳಿಗಾಗಿ ಇಡೀ ಜೀವನವನ್ನು ಮುಡಿಪಾಗಿಟ್ಟಿದ್ದ ಮಾಹಾತ್ಮ ಗಾಂಧಿಜೀಯವರನ್ನು ಬಲಿ ತೆಗೆದುಕೊಂಡ ದಿನ ಇಂದು. ಇಂತಹ ಹುತಾತ್ಮರಿಗೆ ಗೌರವ ಸಲ್ಲಿಸಬೇಕಾದರೆ ದೇಶದ ಪ್ರಜಾಪ್ರಭುತ್ವ, ಭಾವೈಕ್ಯತೆ, ಸಹಬಾಳ್ವೆ, ಸಂವಿಧಾನದ ಆಶಯಗಳನ್ನು ಕಾಪಾವುದು, ವಿಚ್ಛಿದ್ರಕಾರಿ ಶಕ್ತಿಗಳನ್ನು ಹಿಮ್ಮೆಟ್ಟಿಸುವುದು ನಮ್ಮ ನೈತಿಕ ಜವಾಬ್ದಾರಿಯಾಗಬೇಕು ಎಂದು ಹಿರಿಯ ಸಾಹಿತಿ, ಪತ್ರಕರ್ತ ಡಾ. ರಂಜಾನ್ ದರ್ಗಾ ಕರೆ ನೀಡಿದರು.

ಹುತಾತ್ಮ ದಿನದ ಅಂಗವಾಗಿ ಸೌಹಾರ್ದ ಕರ್ನಾಟಕ, ಧಾರವಾಡ ವೇದಿಕೆ ಧಾರವಾಡದ ಕರ್ನಾಟಕ ಕಾಲೇಜು ವೃತ್ತದಿಂದ ಜುಬ್ಲಿ ವೃತ್ತದವರೆಗೆ ಸಂಘಟಿಸಿದ್ದ ಬೃಹತ್ ಮಾನವ ಸರಪಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಚಿಂತಕ, ಹೋರಾಟಗಾರ ಡಾ. ಸಿದ್ದನಗೌಡ ಪಾಟೀಲ ಮಾತನಾಡಿ, ನೂರಾರು ಮಹಾನ್ ವ್ಯಕ್ತಿಗಳು ದೇಶಕ್ಕಾಗಿ ತ್ಯಾಗ ಮಾಡಿರುವುದನ್ನು ಮರೆಮಾಚಿ ದೇಶದ್ರೋಹಿಗಳನ್ನು ದೇಶಪ್ರೇಮಿಗಳು ಎಂದು ಬಿಂಬಿಸಲಾಗುತ್ತಿದೆ. ಜನರ ಕೂಡುಬಾಳ್ವೆ, ಸೌಹಾರ್ದತೆಯ ಪರಂಪರೆಯನ್ನು ಕಾಪಾಡುವ ಜಾಗೃತಿ ಮೂಡಿಸಲು ಮಾನವ ಸರಪಳಿಯಂತ ಸೌಹಾರ್ದ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದರು.

ಸೌಹಾರ್ದ ಕರ್ನಾಟಕದ ಸಂಚಾಲಕ ಮಹೇಶ ಪತ್ತಾರ, ಸಾಹಿತಿಗಳಾದ ಡಾ. ಸದಾಶಿವ ಮರ್ಜಿ, ಬಸುರಾಜ ಸೂಳಿಭಾವಿ ಮಾತನಾಡಿದರು. ಬಿ.ಎನ್. ಪೂಜಾರಿ, ಎ.ಎಂ. ಖಾನ್, ಎಸ್.ಎಂ. ಬುಡನಖಾನ್, ಬಿ.ಐ. ಈಳಿಗೇರ, ಅತೀಕ್ ಸಂಗ್ರೇಶಕೊಪ್ಪ, ಜೋಷಫ್ ಮಲ್ಲಾಡಿ, ಗಂಗಾಧರ ಗಾಡದ, ಮುಸ್ತಾಕ ಹಾವೇರಿಪೇಟ, ಡಾ. ಲಿಂಗರಾಜ ಅಂಗಡಿ, ಪ್ರೊ. ಕೆ.ಎಸ್. ಕೌಜಲಗಿ, ಡಾ. ಅಫಜಲ್ ಭಾವಿಕಟ್ಟಿ, ಅನ್ನಪೂರ್ಣ ಮಡಿವಾಳರ, ಕೆ.ಎಚ್. ಪಾಟೀಲ, ಗಾಯತ್ರಿ ಹಡಪದ ಸೇರಿದಂತೆ ವಿದ್ಯಾರ್ಥಿಗಳು ಸೌಹಾರ್ದತಾ ಮಾನವ ಸರಪಳಿಯಲ್ಲಿ ಕೈ ಜೋಡಿಸಿದರು.

### ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಂಪಾದಕರ ಸಭೆಯಲ್ಲಿ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ ಒತ್ತಾಯ

# ತಾರತಮ್ಯ ಮಾಡದೇ ಜಾಹೀರಾತು ನೀಡಿ

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನ ಮತ್ತು ಪ್ರಾದೇಶಿಕ ಪತ್ರಿಕೆಗಳು ತೀರಾ ಸಂಕಷ್ಟ ಅನುಭವಿಸುತ್ತಿವೆ. ಸರ್ಕಾರದ ಜಾಹೀರಾತುಗಳು ನೀಡುವಲ್ಲಿ ತಾರತಮ್ಯವಾಗುತ್ತಿವೆ. ರಾಜ್ಯ ಮಟ್ಟದ ಪತ್ರಿಕೆಗಳಿಗೆ ಹೆಚ್ಚಿನ ಜಾಹೀರಾತುಗಳನ್ನು ನೀಡಿ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಜಾಹೀರಾತು ನೀಡದೇ ಅನ್ಯಾಯ ಮಾಡುತ್ತಿದೆ ಎಂದು ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ ಗಂಭೀರ ಆರೋಪ ಮಾಡಿದರು.

ಅವರು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ವಿಜಯಪುರ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಂಪಾದಕರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಸರ್ಕಾರ ಪತ್ರಿಕೆಗಳಿಗೆ ಕಳೆದ ಒಂದು ವರ್ಷದಿಂದ ಜಾಹೀರಾತು ದರ ಪರಿಷ್ಕರಣೆ ಮಾಡಿಲ್ಲ.



ಪ್ರಕಟಗೊಂಡ ಜಾಹೀರಾತುಗಳ ಮೊತ್ತವನ್ನು ಏಜೆನ್ಸಿಗಳು ಪತ್ರಿಕೆಗಳ ಸಂಪಾದಕರಿಗೆ ಕೊಡದೇ ಸತಾಯಿಸುತ್ತಿವೆ. ಇದರಿಂದ ಪತ್ರಿಕೆಗಳನ್ನು ಮುನ್ನೆಡೆಸುವುದಕ್ಕೆ ಸಂಪಾದಕರಿಗೆ ಕಷ್ಟವಾಗಿದೆ. ಇಂತಹ ಕ್ಲಿಷ್ಟ ಪರಿಸ್ಥಿತಿಯಲ್ಲಿ ರಾಜ್ಯ ಸರ್ಕಾರ ಪತ್ರಿಕೆಗಳ ನೆರವಿಗೆ ಬಂದು ತಾರತಮ್ಯ ನೀತಿ ಅನುಸರಿಸದೇ ಜಾಹೀರಾತು ನೀತಿ ಪ್ರಕಾರ ಜಿಲ್ಲಾ ಪ್ರಾದೇಶಿಕ ಪತ್ರಿಕೆಗಳಿಗೆ ಎಲ್ಲಾ ಬಗೆಯ ಜಾಹೀರಾತುಗಳನ್ನು ಬಿಡುಗಡೆ ಮಾಡಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

> ಗಡಿಭಾಗದ ಪತ್ರಿಕೆಗಳಿಗೆ 2023ರ ಸೆಪ್ಟೆಂಬರ್ ತಿಂಗಳಿನಿಂದ ಬಿಡುಗಡೆ ಮಾಡಬೇಕಾದ ಮಾಸಿಕ ಜಾಹೀರಾತುಗಳನ್ನು ಬಿಡುಗಡೆ ಮಾಡಿಲ್ಲ. ಇದು ಜಾಹೀರಾತು ನೀತಿಯ ಸ್ಪಷ್ಟ ಉಲ್ಲಂಘನೆಯಾಗಿದೆ. ಸರ್ಕಾರ ಕೂಡಲೇ ಗಡಿಭಾಗದ ಪತ್ರಿಕೆಗಳಿಗೆ ಬಾಕಿ ಇರುವ 5 ತಿಂಗಳ ಜಾಹೀರಾತುಗಳನ್ನು ಬಿಡುಗಡೆ ಮಾಡಬೇಕು.
>
> – ಎ.ಸಿ. ತಿಪ್ಪೇಸ್ವಾಮಿ. ರಾಜ್ಯಾಧ್ಯಕ್ಷರು.

ಈ ಸಂದರ್ಭದಲ್ಲಿ ಜಿಲ್ಲಾ ದಿನ ಪತ್ರಿಕೆಗಳ ಸಂಪಾದಕರ ಸರ್ವಾನುಮತದ ನಿರ್ಣಯದಂತೆ ಗುಮ್ಮಟನಗರಿ ಪತ್ರಿಕೆಯ ವ್ಯವಸ್ಥಾಪಕ ಸಂಪಾದಕ ಮೊಹ್ಮದ್ ಇರ್ಫಾನ್ ಶೇಖ್ ಅವರನ್ನು ಅಧ್ಯಕ್ಷರನ್ನಾಗಿ, ವಾರ್ತಾ ಪತ್ರಿಕೆ ಸಂಪಾದಕ ಅವಿನಾಶ ಬಿದರಿ ಅವರನ್ನು ಪ್ರಧಾನ ಕಾರ್ಯದರ್ಶಿಯನ್ನಾಗಿ, ಕೇಂದ್ರ ಸಂಘದ ಕಾರ್ಯಕಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರನ್ನಾಗಿ ಕೆ.ಕೆ. ಕುಲಕರ್ಣಿ, ಮಾಧವರಾವ್ ಕುಲಕರ್ಣಿ, ರಾಜು ಕೊಂಡಗೂಳಿ ಇವರನ್ನು ನೇಮಕ ಮಾಡಲಾಯಿತು.

ರಾಜ್ಯ ಸಮಿತಿ ಪ್ರಧಾನ ಕಾರ್ಯದರ್ಶಿ ಚನ್ನಬಸವ, ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಕಾರ್ಯದರ್ಶಿ ರಶ್ಮಿ ಪಾಟೀಲ, ಸುಚೇಂದ್ರ ಲಂಬು, ಖಜಾಂಚಿ ಖಾನ್‌ಸಾಬ ಮೋಮೀನ, ಗದಗ ಜಿಲ್ಲಾಧ್ಯಕ್ಷ ನೂರಾಹ್ಮದ ಅ.ಮಕಾನದಾರ ಸೇರಿದಂತೆ ಜಿಲ್ಲಾ ಪತ್ರಿಕೆಗಳ ಸಂಪಾದಕರಾದ ವಿನೋದ ಸಾರವಾಡ, ಚಿದಂಬರ ಕುಲಕರ್ಣಿ, ಉಮೇಶ ಶಿವಶರಣ, ಕೌಶಲ್ಯ ಪನಾಳಕರ, ಲಕ್ಷ್ಮೀ ವಾಲೀಕಾರ, ಸೀತಾರಾಮ ಕುಲಕರ್ಣಿ, ಫಯಾಜ ಕಲಾದಗಿ, ರಜಾಕ ಬಾಗೇವಾಡಿ, ಪರಶುರಾಮ ಪವಾರ, ಶರತ ಅರ್ಜುಣಗಿ, ಯೂಸೂಪ್ ನೇವಾರ, ಮಲ್ಲಿಕಾರ್ಜುನ ಮಠ, ಮಲಕು ಹೂಗಾರ, ಶ್ರೀನಿವಾಸ ಸೊರಗೊಂಡ ಮುಂತಾದವರಿದ್ದರು.

## 'ಕುಮಾರವ್ಯಾಸ ಭಾರತ' ಗಮಕ ಚಿತ್ರೀಕರಣಕ್ಕೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಭಾರತ ಕಥಾಮಂಜರಿ ಕಾವ್ಯವನ್ನು ಸಾರಸ್ವತ ಲೋಕಕ್ಕೆ ನೀಡಿದ ಗದುಗಿನ ನಾರಣಪ್ಪ ಅಂದರೆ ಕವಿ ಕುಮಾರವ್ಯಾಸನ ಜಯಂತಿಯನ್ನು ಅವನ ಆರಾಧ್ಯದೈವ ಗದುಗಿನ ವೀರನಾರಾಯಣನ ಸನ್ನಿಧಾನದಲ್ಲಿ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಗದುಗಿನ ಆರಾಧನಾ ಫೌಂಡೇಶನ್, ಹೊಂಬಾಳಿ ಕಲಾ ಅಕಾಡೆಮಿ ನಿರ್ಮಿಸುತ್ತಿರುವ ಕುಮಾರವ್ಯಾಸ ಭಾರತದ ಗಮಕ ಚಿತ್ರೀಕರಣಕ್ಕೆ ಚಾಲನೆ ನೀಡಲಾಯಿತು. ಗಮಕ ವಿದ್ವಾಂಸರಾದ ವಿಶ್ವನಾಥ ಕುಲಕರ್ಣಿ ಅವರಿಂದ ಗಮಕವಾಚನ ನೆರವೇರಿತು. ಕಲಾವಿದೆ ಮಂಜರಿ ಹೊಂಬಾಳಿ ಅವರ ನಿರ್ದೇಶನದಲ್ಲಿ ಚಿತ್ರೀಕರಣ ಶುಭಾರಂಭಗೊಂಡಿತು.

ಡಾ. ದತ್ತಪ್ರಸನ್ನ ಪಾಟೀಲ್ ಮಾತನಾಡಿ, ಕುಮಾರವ್ಯಾಸ ಕನ್ನಡದ ಆಸ್ತಿ. ಅವನು ಬರೆದ 'ಗದುಗಿನ ಭಾರತ'ವನ್ನು ಪ್ರತಿಯೊಬ್ಬರೂ ಕೇಳಿ ಆಸ್ವಾದಿಸಬೇಕು. ಆ ನಿಟ್ಟಿನಲ್ಲಿ ಡಿಜಿಟಲ್ ಅಂತರ್ಜಾಲ ಮಾಧ್ಯಮ ಹಾಗೂ ಯೂಟ್ಯೂಬ್ ಇತ್ಯಾದಿಗಳ ಮೂಲಕ ಪ್ರತಿಯೊಬ್ಬರಿಗೂ ಸುಲಭವಾಗಿ ತಮ್ಮ ಲಭ್ಯವಾಗುವಂತೆ ಮಾಡುವ ಉದ್ದೇಶದಿಂದ ಇಂದು ಹೊಂಬಾಳಿ ಕಲಾ ಅಕಾಡೆಮಿ ಕೈಗೊಂಡ ಗಮಕ ಚಿತ್ರೀಕರಣ ಯೋಜನೆ ಶ್ಲಾಘನೀಯ ಎಂದರು.

ಮಂಜರಿ ಹೊಂಬಾಳಿ ಮಾತನಾಡಿ, ಕುಮಾರವ್ಯಾಸ ಜಯಂತಿಯ ದಿನ ಚಿತ್ರೀಕರಣಕ್ಕೆ ಚಾಲನೆ ದೊರೆಯುತ್ತಿರುವುದು ಅತ್ಯಂತ ಅರ್ಥಪೂರ್ಣ. ಇದು ಎರಡು–ಮೂರು ವರ್ಷಗಳ ಯೋಜನೆಯಾಗಿದ್ದು, ಒಂದು ಭಾಗದ ಚಿತ್ರೀಕರಣ ಪೂರ್ಣಗೊಂಡ ನಂತರ 'ಹೊಂಬಾಳಿ ಪ್ರತಿಷ್ಠಾನ' ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ವೀರನಾರಾಯಣ ದೇವಸ್ಥಾನದ ವ್ಯವಸ್ಥಾಪಕ ಪ್ರಹ್ಲಾದಾಚಾರ್ಯ ನಿಲುಗಲ್, ವೇ.ಮೂ ರತ್ನಾಕರ್‌ಭಟ್ ಜೋಶಿ, ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ರಾಘಣ್ಣ ಜೋಷಿ, ರವಿ ಜೋಶಿ, ಗುರುರಾಜ ದೇಶಪಾಂಡೆ, ಮಧುಸೂದನ ಹೊಂಬಾಳಿ, ಹರೀಶ ಹೊಂಬಾಳಿ ಮತ್ತಿತರು ಉಪಸ್ಥಿತರಿದ್ದರು.

## ಸಿ.ಎಂ ಭಾವಚಿತ್ರ, ಹಾಸ್ಟೇಲ್‌ಗೆ ಕಲ್ಲು ಖಂಡನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಮಂಡ್ಯ ಜಿಲ್ಲಾ ಕೆರೆಗೋಡ ಗ್ರಾಮದಲ್ಲಿ ಬಿ.ಜೆ.ಪಿ ಹಾಗೂ ಜೆ.ಡಿ.ಎಸ್ ಪಕ್ಷದ ಕಾರ್ಯಕರ್ತರು ಕುರುಬ ಸಮಾಜದ ಹಾಸ್ಟೇಲ್ ಕಟ್ಟಡಕ್ಕೆ ಕಲ್ಲು ತೂರಾಟ ನಡೆಸಿರುವುದು ಹಾಗೂ ಮಹಾತ್ಮ ಕನಕದಾಸರ, ಮುಖ್ಯಮಂತ್ರಿ ಸಿದ್ದರಾಮಯ್ಯರ ಭಾವಚಿತ್ರ ಧ್ವಂಸಗೊಳಿದ ಕೃತ್ಯವನ್ನು ಗದಗ ಜಿಲ್ಲಾ ಕುರುಬರ ಸಂಘ ಖಂಡಿಸಿದೆ.

ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ತಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡಲಿ. ಆದರೆ ಸಮಾಜದ ಕಟ್ಟಡ ಹಾಗೂ ಸಮಾಜದ ಸಂತ ಮಹಾತ್ಮ ಕನಕದಾಸರ ಭಾವಚಿತ್ರ ಮತ್ತು ಮುಖ್ಯಮಂತ್ರಿಗಳ ಭಾವಚಿತ್ರ ಧ್ವಂಸಗೊಳಿಸಿದ್ದರ ಹಿಂದೆ ಕೆಲವು ಪಟ್ಟಭದ್ರ ಹಿತಾಸಕ್ತಿಗಳಿದ್ದು, ಇಂತಹ ಕೃತ್ಯ ಮಾಡುತ್ತಿರುವುದು ಅತ್ಯಂತ ನೋವಿನ ಸಂಗತಿ. ಇಂಥಹ ಕೃತ್ಯವೆಸಗಿದವರನ್ನು ಕೂಡಲೇ ಬಂಧಿಸಿ ರಾಜ್ಯದಲ್ಲಿ ಮುಂದೆ ಆಗಬಹುದಾದ ಅನಾಹುತಗಳನ್ನು ತಡೆಗಟ್ಟಬೇಕೆಂದು ಕರ್ನಾಟಕ ಪ್ರದೇಶ ಕುರುಬರ ಸಂಘ ಗದಗ ಜಿಲ್ಲಾ ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದೆ.

## ಹಂಪಿ ಉತ್ಸವ ಕವಿಗೋಷ್ಠಿಗೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ಫೆ.2ರಂದು ವಿರುಪಾಕ್ಷೇಶ್ವರ ವೇದಿಕೆಯಲ್ಲಿ ವಿಶ್ವ ವಿಖ್ಯಾತ ಹಂಪಿ ಉತ್ಸವ ಕವಿಗೋಷ್ಠಿ ಜರುಗಲಿದ್ದು, ಹುಲಕೋಟಿಯ ಪ್ರಸಿದ್ಧ ಶಾಯಿರಿ ಕವಿ ಮರುಳಸಿದ್ದಪ್ಪ ದೊಡ್ಡಮನಿ ಇವರು ಕವಿಗೋಷ್ಠಿಗೆ ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಸಿವಿಕೆಯವರ ನೆನಪು ಚಿರಸ್ಮರಣೀಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಪ್ರತಿ ತಿಂಗಳ ಸೋಮವಾರ ನಡೆಯುವ ಚನ್ನಮ್ಮನ ಮನೆ ಕಾರ್ಯಕ್ರಮ ಪಟ್ಟಣದ ನಾಗನಗೌಡ ಪಾಟೀಲ ನಿವಾಸದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ದಿ. ಪ್ರೊ. ಸಿ.ವಿ. ಕೆರಿಮನಿ ಅವರ ಕುರಿತು ಎಸ್.ಎಫ್. ಆದಿ ಉಪನ್ಯಾಸ ನೀಡಿ, ಪ್ರೊ. ಸಿವಿಕೆ ಈ ಭಾಗದ ಹೆಮ್ಮೆಯ ಸಾಹಿತಿಯಾಗಿ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದಿದ್ದಾರೆ. ಕನ್ನಡ ಉಪನ್ಯಾಸಕರಾಗಿ ಈ ಊರಿಗೆ ಪಾದಾರ್ಪಣೆ ಮಾಡಿ, ಅಲ್ಲಿಂದ ಇಲ್ಲಿಯವರೆಗೂ ತಮ್ಮದೇ ಆದ ಸಾವಿರಾರು ಶಿಷ್ಯರನ್ನು ಹೊಂದಿದ್ದ ಅವರ ನಿರರ್ಗಳವಾದ ಕನ್ನಡ ಭಾಷಾ ಪಾಂಡಿತ್ಯ ಎಂದೆಂದಿಗೂ ಮರೆಯಲಾಗದು. ಪಟ್ಟಣದ ಕೀರ್ತಿಯನ್ನು ಸಾಹಿತ್ತಿಕವಾಗಿ ಬೆಳೆಗಿಸಿದ ಸಿವಿಕೆಯವರ ನೆನಪು ಈ ಭಾಗದಲ್ಲಿ ಚಿರಸ್ಮರಣೀಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಮಂಜುನಾಥ ಮಾಗಡಿ ವಹಿಸಿದ್ದರು. ನಾಗನಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು. ಅತಿಥಿಗಳಾಗಿ ಚಂಬಣ್ಣ ಬಾಳಿಕಾಯಿ, ದೇವಣ್ಣ ಬಳಿಗಾರ, ಡಾ. ಪಿ.ಡಿ. ತೋಟದ, ಶಿವನಗೌಡ ಅಡರಕಟ್ಟಿ, ಬಿ.ಎಂ. ಹೊರಟ್ಟಿ, ವೀರೇಂದ್ರಕುಮಾರ ಕಟಗಿ, ಪ್ರವೀಣ ಬಾಳಿಕಾಯಿ, ಗಂಗಾಧರ ಮೆಣಸಿನಕಾಯಿ, ಜಗದೀಶ ಆಚಾರಿ, ರಾಜು ಲಿಂಬಿಕಾಯಿ, ಪ್ರವೀಣ ಹೊಟ್ಟಿ, ಮಂಜು ಮುಳುಗುಂದ, ಮಲ್ಲನಗೌಡ ಪಾಟೀಲ್, ಮಾಂತೇಶ ಉಮಚಗಿ, ಮುಂತಾದವರಿದ್ದರು.

ಗೀತಾ ಪಾಟೀಲ್ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ನಾಗರಾಜ್ ಕಳಸಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರು ಮಾಗಡಿ ನಿರೂಪಿಸಿದರು. ಸೋಮಶೇಖರ್ ಕೆರಿಮನಿ ವಂದಿಸಿದರು.

ಶ್ರೀ ರಂಭಾಪುರಿ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ಮಾಹಿತಿ

# ಶ್ರೀ ರಂಭಾಪುರಿ ಜಗದ್ಗುರುಗಳ ಫೆಬ್ರುವರಿ ತಿಂಗಳ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ ಫೆಬ್ರುವರಿ ಮಾಹೆಯ ಪ್ರವಾಸ ಕಾರ್ಯಕ್ರಮದ ಕುರಿತು ಶ್ರೀ ಜಗದ್ಗುರು ರಂಭಾಪುರಿ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ಮಾಹಿತಿ ನೀಡಿದ್ದಾರೆ.



ಫೆ. 1ರಂದು ಸೊರಬ ತಾಲೂಕ ಬಂಕಸಾಣ ಗ್ರಾಮದಲ್ಲಿ ಮಹಾರುದ್ರಯಾಗದ ಸಮಾರೋಪ ಸಮಾರಂಭ, ಫೆ.3ರಂದು ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಮನಗೂಳಿ ಹಿರೇಮಠದಲ್ಲಿ ಜರುಗುವ ಧರ್ಮ ಜಾಗೃತಿ ಸಮಾರಂಭ, ಫೆ.4 ಮತ್ತು 5ರಂದು ಹಾವೇರಿ ಜಿಲ್ಲೆಯ ಶಿಗ್ಗಾಂವಿ ತಾಲೂಕು ಬಂಕಾಪುರದ ನೂತನ ಕಲ್ಯಾಣ ಮಂಟಪದಲ್ಲಿ ಮಹಾಪೂಜಾ ಹಾಗೂ ಲಿಂ.ರುದ್ರಮುನಿ ಶ್ರೀಗಳವರ ಪುಣ್ಯಾರಾಧನಾ ಸುವರ್ಣ ಮಹೋತ್ಸವ, 6ರಂದು ಹಾವೇರಿ ಜಿಲ್ಲೆಯ ಹಾನಗಲ್ಲ ತಾಲೂಕಿನ ಬೆಳಗಾಲಪೇಟೆಯಲ್ಲಿ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸುವರು.

ಫೆ. 7ರಂದು ಹರಿಹರ ತಾಲೂಕಿನ ಗುತ್ತೂರು ಗ್ರಾಮದಲ್ಲಿ ಇಷ್ಟಲಿಂಗ ಪೂಜಾ, 9ರಿಂದ 11ರವರೆಗೆ ಬೆಂಗಳೂರಿನಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭ ನಡೆಸುವರು. 12 ಮತ್ತು 13ರಂದು ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನ ಕಡೇನಂದಿಹಳ್ಳಿಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರ ಪೀಠಾರೋಹಣದ 33ನೇ ವರ್ಧಂತಿ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ ಉದ್ಘಾಟನಾ ಸಮಾರಂಭ, 14ರಂದು ಸೊರಬ ತಾಲೂಕಿನ ಚಿಕ್ಕಕಬ್ಬೂರದಲ್ಲಿ ಧರ್ಮ ಜಾಗೃತಿ ಸಮಾರಂಭ, 15 ಮತ್ತು 16ರಂದು ಮಹಾರಾಷ್ಟ್ರದ ತುಳಜಾಪುರದಲ್ಲಿ ಲಿಂ. ಶ್ರೀ ಕೇದಾರ ಸಿದ್ದೇಶ್ವರಲಿಂಗ ಜಗದ್ಗುರುಗಳವರ ಪುತ್ಥಳಿ ಆನಾವರಣ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಫೆ.17ರಂದು ಬಾಗಲಕೋಟ ಜಿಲ್ಲೆಯ ಬೀಳಗಿ ತಾಲೂಕಿನ ಉದಗಟ್ಟಿಯಲ್ಲಿ ಜನ ಜಾಗೃತಿ ಧರ್ಮ ಸಮಾರಂಭ, 18 ಮತ್ತು 19ರಂದು ಬೀಳಗಿ ತಾಲೂಕಿನ ಕುಂದರಗಿಯಲ್ಲಿ ಪುರಪ್ರವೇಶ ಮತ್ತು ಚರಂತಿಮಠದ ಪಟ್ಟಾಧಿಕಾರ ಸಮಾರಂಭ, 20 ಮತ್ತು 21ರಂದು ಕುಂದಗೋಳ ತಾಲೂಕಿನ ಎರೇಬೂದಿಹಾಳದಲ್ಲಿ ಧರ್ಮ ಜಾಗೃತಿ ಸಮಾರಂಭ ಹಾಗೂ ಕಳಸಾರೋಹಣ ಸಮಾರಂಭ, 22ರಂದು ಬಳ್ಳಾರಿ ಜಿಲ್ಲೆಯ ಸೊಂಡೂರು ತಾಲೂಕಿನ ಚೋರನೂರು ಗ್ರಾಮದ ಶ್ರೀ ವೀರಭದ್ರೇಶ್ವರ ಮೂರ್ತಿ ಪ್ರತಿಷ್ಠಾಪನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸುವರು.

ಫೆ.24ರಂದು ಬಾಳೆಹೊನ್ನೂರಿನ ಶ್ರೀ ಪೀಠದಲ್ಲಿ ಪೌರ್ಣಿಮೆಯಂದು ಭಕ್ತಾದಿಗಳಿಗೆ ಆಶೀರ್ವದಿಸುವರು. 26 ಮತ್ತು 27ರಂದು ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಕೂಡ್ಲಗೆರೆಯಲ್ಲಿ ಪುರ ಪ್ರವೇಶ–ಧರ್ಮ ಸಮಾರಂಭ, 28ರಂದು ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ಚಂದನಹಳ್ಳಿ ಗ್ರಾಮದಲ್ಲಿ ನೂತನ ದೇವಸ್ಥಾನದ ಉದ್ಘಾಟನಾ ಸಮಾರಂಭ ಹಾಗೂ 29ರಂದು ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ಬಿದರೆ ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಗೋಪುರ ಕಳಸಾರೋಹಣ ಸಮಾರಂಭದ ಸಾನ್ನಿಧ್ಯ ವಹಿಸುವರೆಂದು ಅವರು ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ರವಿಕಾಂತ ಅಂಗಡಿ ಒತ್ತಾಯ

# ಸಂವಿಧಾನದ ತಿದ್ದುಪಡಿ ಶಿಫಾರಸು ಹಿಂತೆಗೆದುಕೊಳ್ಳಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿಯ 101 ಜಾತಿಗಳಲ್ಲಿ ಪ್ರಮುಖವಾದ ಲಂಬಾಣಿ, ಭೋವಿ, ಕೊರಚ, ಕೊರಮ ಸಮುದಾಯಗಳು ಯಾವ ರೀತಿಯಲ್ಲಿ ಅಭಿವೃದ್ಧಿ ಹೊಂದಿದ್ದಾರೆ ಎಂಬ ವರದಿ ಬಹಿರಂಗ ಮಾಡದೇ ಒಳಗಿಂದೊಳಗೆ ನ್ಯಾ. ಎ.ಜೆ. ಸದಾಶಿವ ಆಯೋಗದ ವರದಿ ಜಾರಿಗೆ ತರಲು ಕಾಂಗ್ರೆಸ್ ಸರಕಾರ ಮುಂದಾಗಿರುವುದು ನೋವಿನ ಸಂಗತಿ ಎಂದು ಗೋರ ಸೇನಾ ಕರ್ನಾಟಕ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ದಲಿತ ಸಮುದಾಯಗಳಿಗೆ ಅಗತ್ಯ ಸೌಲಭ್ಯಗಳ ಕುರಿತು ನ್ಯಾ. ಎ.ಜೆ. ಸದಾಶಿವ ಆಯೋಗದ ವರದಿ ಬೆಳಕು ಚೆಲ್ಲಬಹುದೆಂದು ನಿರೀಕ್ಷಿಸಿದ್ದೆವು. ಆದರೆ ಸೋರಿಕೆಯಾಗಿರುವ ವರದಿಯ ಅಂಶಗಳು ದಲಿತ ಸಮುದಾಯದ ಒಳಗೆ ಪರಸ್ಪರ ದ್ವೇಷ, ಅನುಮಾನ, ವೈಭವೀಕರಣ, ಅಪಮಾನ, ಅವಹೇಳನ ಇತ್ಯಾದಿ ತಪ್ಪು ಕಲ್ಪನೆ ಬಿತ್ತುತ್ತಿದೆ.

ಈ ಹಿಂದಿನ ಬಿಜೆಪಿ ಸರ್ಕಾರವು ಸದಾಶಿವ ಆಯೋಗವನ್ನು ರದ್ದುಪಡಿಸಿ ಮಿಸಲಾತಿಯನ್ನು ಹೆಚ್ಚಿಸಿ ಲಂಬಾಣಿ, ಭೋವಿ, ಕೊರಚ, ಕೊರಮ ಸಮುದಾಯಗಳಿಗೆ ಶೇ.4.5ರಷ್ಟನ್ನು ನೀಡಿತ್ತು. ಲೋಕಸಭಾ ಚುನಾವಣೆ ಹೊಸ್ತಿಲಲ್ಲಿ ಈಗಿನ ಕಾಂಗ್ರೆಸ್ ಸರ್ಕಾರ ರದ್ದುಪಡಿಸಿದ ಸದಾಶಿವ ಆಯೋಗವನ್ನು ಮತ್ತೆ ಮುನ್ನಲೆಗೆ ತಂದು ಸಚಿವ ಸಂಪುಟದಲ್ಲಿ ಸಂವಿಧಾನದ 341(3) ತಿದ್ದುಪಡಿಗಾಗಿ ಕೇಂದ್ರಕ್ಕೆ ಶಿಫಾರಸ್ಸು ಮಾಡಿದ್ದು, ಹಿಂದಿನ ಬಿಜೆಪಿ ಸರ್ಕಾರದ ಒಳಮಿಸಲಾತಿ ಜಾರಿ ಶಿಫಾರಸ್ಸು ಎಂದು ಹೇಳುತ್ತಾ ಜನರಿಗೆ ಸಳ್ಳು ಹೇಳುತ್ತಿದೆ.

ಈ ಬಗ್ಗೆ ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡದೇ ರಾಜ್ಯ ಸರಕಾರ ನಮ್ಮ ಬೆಂಬಲಕ್ಕೆ ನಿಲ್ಲಲಿ ಎಂದು ಕಾನೂನು ಸಚಿವ ಡಾ. ಎಚ್.ಕೆ. ಪಾಟೀಲರಲ್ಲಿ ವಿನಂತಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪರಮೇಶ ನಾಯಕ, ದಯಾನಂದ ಪವಾರ, ಪಾಂಡು ಚವ್ಹಾಣ, ಅನಿಲ ರಾಠೋಡ, ಸೋಮಪ್ಪ ಲಮಾಣಿ, ಟಿ.ಡಿ. ಪೂಜಾರ, ವಿಠ್ಠಲ ತೋಟದ, ಶಿವಪ್ಪ ಸನಾರ, ಮುತ್ತಣ್ಣ ಸಂದಕದ, ಸೋಮು ಗುಡಿ, ಶ್ರೀಕಾಂತ ಪಾಪನಾಶಿ ಸೇರಿದಂತೆ ಇತರರಿದ್ದರು.

ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಈ ಸಮುದಾಯದ ಜನಪ್ರತಿನಿಧಿಗಳಿಗೆ ಯಾವುದೇ ಹುದ್ದೆಯನ್ನು ನೀಡದೆ ನೆಪಕ್ಕೆ ಮಾತ್ರ ಸರ್ವರಿಗೂ ಸಮಪಾಲು ಸಮಬಾಳು ಎನ್ನುವಂತಾಗಿ. ಈ ಕೂಡಲೇ ಸಂವಿಧಾನದ 341(3) ತಿದ್ದುಪಡಿಗಾಗಿ ಕೇಂದ್ರಕ್ಕೆ ಶಿಫಾರಸ್ಸು ಮಾಡಿರುವುದನ್ನು ಹಿಂತೆಗೆದುಕೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸರಕಾರದ ವಿರುದ್ಧ ರಾಜ್ಯಾದ್ಯಂತ ಹೋರಾಟ ಮಾಡಲಾಗುವುದು. ಯಾವುದೇ ಅಹಿತಕರ ಘಟನೆಗೆ ಸರ್ಕಾರವೇ ಹೊಣೆಯಾಗುತ್ತದೆ ಎಂದು ರವಿಕಾಂತ ಅಂಗಡಿ ಎಚ್ಚರಿಸಿದರು.

# ಪ್ರಯಾಣಿಕರಿಗೆ ಸೌಲಭ್ಯ ಒದಗಿಸಿ

▶▶ ಮೊದಲನೇ ಪುಟದಿಂದ

ಗದಗ ಹೊಸ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಕಾರ್ಯಕ್ರಮ ನಡೆಸುವ ಜಾಗೆ ಹಾಗೂ ಕಾರ್ಯಕ್ರಮದ ರೂಪುರೇಷೆಗಳ ಕುರಿತು ಪರಿಶೀಲಿಸಿ ಸೂಕ್ತ ಸಲಹೆ ನೀಡಿದರು.

ಸಭೆಯಲ್ಲಿ ಮುಖ್ಯ ಸಂಚಾರ ವ್ಯವಸ್ಥಾಪಕರು ವಿವೇಕಾನಂದ ವಿಶ್ವಜ್ಞ, ಹಾಗೂ ಮುಖ್ಯ ತಾಂತ್ರಿಕ ಶಿಲ್ಪಿ ರಘುನಾಥ್, ಕೇಂದ್ರ ಕಚೇರಿ ಹುಬ್ಬಳ್ಳಿ ಹಾಗೂ ಡಿ.ಎಂ. ದೇವರಾಜ, ವಿಭಾಗೀಯ ನಿಯಂತ್ರಣಾಧಿಕಾರಿ, ಪಿ ವೈ ಗಡೇದ, ವಿಭಾಗೀಯ ತಾಂತ್ರಿಕ ಶಿಲ್ಪಿ ಕೆ.ಎನ್. ಮಂಜುನಾಥ್ ಕಾನೂನು ಅಧಿಕಾರಿ, ಹಾಗೂ ವಿಭಾಗದ ಅಧಿಕಾರಿ ಮತ್ತು ಘಟಕ ವ್ಯವಸ್ಥಾಪಕರು ಉಪಸ್ಥಿತರಿದ್ದರು.

# ವಿಶೇಷ ಅಗತ್ಯವುಳ್ಳ ಮಕ್ಕಳು ಮುಖ್ಯವಾಹಿನಿಗೆ ಬರಲಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ವಿಶೇಷ ಅಗತ್ಯವುಳ್ಳ ಮಕ್ಕಳನ್ನು ಮುಖ್ಯವಾಹಿನಿಗೆ ತರುವಲ್ಲಿ ಪಾಲಕ–ಪೋಷಕರ ಹಾಗೂ ಸಮುದಾಯದ ಪಾತ್ರ ಮಹತ್ವದ್ದಾಗಿದೆ. ಈ ಕುರಿತು ಅರಿವು ಮೂಡಿಸಿ ವಿಶೇಷ ಚೇತನರ ಬಾಳಿಗೆ ಬೆಳಕಾಗುವ ಪುಣ್ಯದ ಕಾರ್ಯಕ್ಕೆ ನಾವೆಲ್ಲರೂ ಮುಂದಾಗೋಣ ಎಂದು ಗದಗ ಶಹರ ಸಂಪನ್ಮೂಲ ಕೇಂದ್ರದ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಅಭಿಪ್ರಾಯಪಟ್ಟರು.

ಅವರು ಗದುಗಿನ ಡಾ. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಎಡ್. ಪ್ರಶಿಕ್ಷಣಾರ್ಥಿಗಳಿಗೆ 'ಸಮನ್ವಯ ಶಿಕ್ಷಣ: ಒಂದು ಅವಲೋಕನ' ವಿಷಯವಾಗಿ ಉಪನ್ಯಾಸ ನೀಡಿದರು.

ವಿಶೇಷ ಅಗತ್ಯವುಳ್ಳ ಮಕ್ಕಳು ಸಂವೇದನಾಶೀಲರು. ಇವರಿಗೆ ಆತ್ಮಸ್ಥೈರ್ಯ ಹೆಚ್ಚಿಸುವ, ಸಹಕಾರ, ಪರಸ್ಪರ ಹೊಂದಾಣಿಕೆ, ಕ್ರೀಡಾ ಮನೋಭಾವ ಹಾಗೂ ಹೊಸ ಅನುಭವಗಳನ್ನು ಪಡೆಯಲು ಪೂರಕವಾಗಿ ಬೇರೆ ಬೇರೆ ಚಟುವಟಿಕೆಗಳಲ್ಲಿ ಅವರನ್ನು ತೊಡಗಿಸುವ ಕಾರ್ಯಕ್ರಮ ರೂಪಿಸಿದಾಗ ಈ ಮಕ್ಕಳಲ್ಲಿ ಹೊಸತನ ಮೂಡಲು ಸಾಧ್ಯ ಎಂದರು.

ಉಪನ್ಯಾಸಕಿ ಡಾ.ಗಿರಿಜಾ ಹಸಬಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಅಂಗವಿಕಲತೆ ಶಾಪವಲ್ಲ. ಈ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಈ ಮಕ್ಕಳು ಇತರ ಸಾಮಾನ್ಯ ಮಕ್ಕಳೊಂದಿಗೆ ಕಲಿಯಲು ನಾವು ಸಹಕರಿಸಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಚಾರ್ಯ ಶ್ರೀಶೈಲ ಕಾಳಿ, ಯಾವ ಮಕ್ಕಳೂ ಶಾಲಾ ಶಿಕ್ಷಣದಿಂದ ವಂಚಿತರಾಗದಂತೆ ಕ್ರಮ ಕೈಗೊಂಡು, ವಿಶೇಷ ಚೇತನ ಮಕ್ಕಳಿಗೆ ಶಾಲಾ ಬೋಧನೆಯಲ್ಲಿ ಪ್ರಾಶಸ್ತ್ಯ ನೀಡಿ ಅವರಲ್ಲಿ ಚೈತನ್ಯ ತುಂಬಬೇಕೆಂದರು.

ರಾಜೇಶ್ವರಿ ಆಲೂರ ಹಾಗೂ ರೋಹಿಣಿ ಹಲಗತ್ತಿ ಪ್ರಾರ್ಥಿಸಿದರು. ಪ್ರೊ. ಕೆ.ಬಿ. ಸಂಕನಗೌಡ್ರ ಸ್ವಾಗತಿಸಿದರು. ಪ್ರೊ. ಮೈತ್ರಾ ಸೈದಾಪೂರ ಪರಿಚಯಿಸಿದರು. ಪ್ರೊ. ಲತಾ ಹಂಡಿ ನಿರೂಪಿಸಿದರು. ಎಂ.ಎನ್. ನದಾಫ ನಿರ್ವಹಿಸಿದರು. ಪೂರ್ಣಿಮಾ ಮುರಗಿ ವಂದಿಸಿದರು.

# ಸಾರಿಗೆ ಬಸ್‌ಗಳ ಸಂಖ್ಯೆ ಹೆಚ್ಚಿಸಲು ಮನವಿ




**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಜಾಗೃತ ನಾಗರಿಕರ ವೇದಿಕೆ ವತಿಯಿಂದ ಕೆಎಸ್‌ಆರ್‌ಟಿಸಿ ಗದಗ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ನಗರದಲ್ಲಿ ಬಸ್ಸುಗಳ ಸಂಚಾರ ಸೇವೆಯನ್ನು ಪ್ರಾರಂಭಿಸುವಂತೆ ಮನವಿ ಸಲ್ಲಿಸಿದರು.

ಸಾರ್ವಜನಿಕರ ಹಿತದೃಷ್ಟಿಯಿಂದ ನಗರದಲ್ಲಿ ಸಾರಿಗೆ ಬಸ್‌ಗಳ ಸಂಖ್ಯೆಗಳನ್ನು ಹೆಚ್ಚಿಸಿ ಸರಳ ಹಾಗೂ ಸುರಕ್ಷಿತ ಸಾರಿಗೆಗೆ ಅನುಕೂಲ ಮಾಡಿಕೊಡಬೇಕು. ಬೇರೆ ಕಡೆಯಿಂದ ಬರುವ ಹಾಗೂ ಹೋಗುವ ಎಲ್ಲಾ ಬಸ್ಸುಗಳು ಹಳೆಯ ಬಸ್ ನಿಲ್ದಾಣದ ಮೂಲಕವೇ ಹೊರಡುವಂತೆ ಮಾಡಿದರೆ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಅಲ್ಲದೇ ಹಳೆ ಬಸ್ ನಿಲ್ದಾಣದಲ್ಲಿ ಹಿರಿಯ ನಾಗರಿಕರಿಗೆ ಪ್ರತ್ಯೇಕ ಆಸನಗಳನ್ನು ಅಳವಡಿಸುವ ಮೂಲಕ ಅನುಕೂಲ ಮಾಡಿಕೊಡಬೇಕು ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಾಗೃತ ವೇದಿಕೆಯ ಅಧ್ಯಕ್ಷ ಜಿ.ಕೆ. ತಮ್ಮಣ್ಣವರ, ಪ್ರಧಾನ ಕಾರ್ಯದರ್ಶಿ ಎಂ.ಎಫ್. ಡೋಣಿ, ಪದಾಧಿಕಾರಿಗಳಾದ ಕೆ.ಎಸ್. ಗುಗ್ಗರಿ, ಎಂ.ಸಿ. ವಗ್ಗಿ, ಎಂ.ಪಿ. ತಳಬಾಳ, ಆರ್.ಟಿ. ನಾರಾಯಣಪುರ, ಎಂ.ಬಿ. ಕಬ್ಬಿಣ, ಐ.ಕೆ. ಮಣಕವಾಡ, ಬಿ.ಎಂ. ಬಿಳೆಯಲಿ, ಕೆ.ಎಚ್. ಬೇಲೂರ, ವಾಯ್.ಕೆ. ಪಿಡಗಣ್ಣವರ, ಎಸ್.ವಿ. ಬದಿ, ಎಸ್.ಎಸ್. ಬಳ್ಳಾರಿ, ಡಿ.ಎಚ್. ಗರಡಿಮನಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

# ಹಳೆಯ ವಿದ್ಯಾರ್ಥಿಗಳ ಸಂಘದ ಸಭೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕೆಎಲ್‌ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘದ ಸಭೆಯನ್ನು ಆಯೋಜಿಸಲಾಗಿತ್ತು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಎ.ಕೆ. ಮಠ ಮಾತನಾಡಿ, ಮಹಾವಿದ್ಯಾಲಯದಲ್ಲಿ ಕಲಿತು ಹೋದ ವಿದ್ಯಾರ್ಥಿಗಳು ಮಹಾವಿದ್ಯಾಲಯದ ಹೆಮ್ಮೆಯಾಗಿದ್ದು, ಸಮಾಜ ಹಾಗೂ ತಾವು ಕಲಿತು ಹೋದ ವಿದ್ಯಾಸಂಸ್ಥೆಯ ನಡುವೆ ಅತ್ಯುತ್ತಮ ಸುಮಧುರ ಬಾಂಧವ್ಯವನ್ನು ಬೆಸೆಯುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದರು.

ಹಳೆಯ ವಿದ್ಯಾರ್ಥಿಗಳಾದ ಚೇತನ ಕರಾಟೆ ವ್ಯಾಯಾಮ ತರಬೇತಿ ಸಂಸ್ಥೆಯ ಚೇತನ ಹಬೀಬ, ನಟರಂಗ ಸಾಂಸ್ಕೃತಿಕ ಅಕಾಡೆಮಿಯ ಸೋಮಶೇಖರ ಚಿಕ್ಕಮಠ, ಕಾನೂನು ಮಹಾವಿದ್ಯಾಲಯದ ಉಪನ್ಯಾಸಕಿ ನಾಝೀಮಾ ಮುಲ್ಲಾ ಹಾಗೂ ಸರಕಾರಿ ವಲಯದಲ್ಲಿ ಗುತ್ತಿಗೆದಾರರಾಗಿ ಕೆಲಸ ನಿರ್ವಹಿಸುತ್ತಿರುವ ಕಿಶನ್ ಸಿಂಗ್ ನಾಥ್ ಸಭೆಯಲ್ಲಿ ಪಾಲ್ಗೊಂಡು ಮಹಾವಿದ್ಯಾಲಯದಲ್ಲಿ ಜರುಗುವ ಅಭಿವೃದ್ಧಿಪರ ಕಾರ್ಯಕ್ರಮಗಳಿಗೆ ತಾವು ಸಾದಾಕಾಲ ಬೆನ್ನೆಲುಬಾಗಿರುವುದಾಗಿ ಭರವಸೆ ನೀಡಿದರು.

ಸಂಘದ ಕಾರ್ಯದರ್ಶಿ ಪ್ರೊ.ವೀಣಾ ತಿರ್ಲಾಪುರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಡಾ. ಎ.ವ್ಹಿ. ದೇವಾಂಗಮಠ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.




# ರಾಮ ಮಂದಿರವಾಯ್ತು, ಭೀಮ ಮಂದಿರವನ್ನೂ ನಿರ್ಮಿಸಿ

▶▶ ಮೊದಲನೇ ಪುಟದಿಂದ

ಶತಮಾನಗಳ ಹಿಂದೂಗಳ ಹೋರಾಟ ತಾರ್ಕಿಕ ಅಂತ್ಯ ಕಂಡಿದೆ. ಬಯಸಿದಂತೆ ಅಯೋಧ್ಯೆಯಲ್ಲಿ ಭವ್ಯವಾದ ರಾಮ ಮಂದಿರ ನಿರ್ಮಿಸಿ ಬಾಲರಾಮನನ್ನು ಪ್ರತಿಷ್ಠಾಪಿಸಲಾಗಿದೆ. ಹೀಗಾಗಿ ಜಗತ್ತಿನಾದ್ಯಂತ ರಾಮನಾಮ ಜಪವೇ ಕೇಳಿಬರುತ್ತಿದೆ. ಅನೇಕರು ಸಂತಸ ವ್ಯಕ್ತಪಡಿಸುತ್ತಿದ್ದು, ನಾನು ಹರ್ಷಿತನಾಗಿದ್ದೇನೆ.

ಅಲ್ಲದೇ, ಕೋಟ್ಯಂತರ ಹಿಂದೂಗಳ ಶತಮಾನಗಳ ಕನಸು ನನಸು ಮಾಡಿದ್ದು ಇದೇ ಭೀಮನ ಸಂವಿಧಾನ ಎನ್ನುವುದು ನಮ್ಮೆಲ್ಲರ ಹೆಮ್ಮೆ. ಹೀಗಾಗಿ, ರಾಮನ ಜೀವನ ಸಂದೇಶ ಸಾರುವ ಅಯೋಧ್ಯೆ ರಾಮ ಮಂದಿರದಂತೆ, ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ ಜೀವನ ಸಂದೇಶವನ್ನು ಜಗತ್ತಿಗೆ ಇನ್ನಷ್ಟು ಪಸರಿಸುವ ಮಂದಿರವೊಂದು ನಿರ್ಮಾಣವಾಗಬೇಕಿದೆ. ಇದು ಅವಶ್ಯ ಕೂಡಾ ಹೌದು.

ಭಾರತ ದೇಶದ ಸಂಪೂರ್ಣ ವಿಮೋಚನೆಗಾಗಿ ದುಡಿದು, ದೇಶಕ್ಕೆ ಸ್ಮರಣೀಯ ಕೊಡುಗೆ ನೀಡಿದ ವೈಚಾರಿಕ ನಾಯಕ ಡಾ. ಅಂಬೇಡ್ಕರ್ ಅವರು ಬದುಕಿದ್ದಾಗ ಅತ್ಯಂತ ಅಮಾನುಷವಾಗಿ ನಡೆಸಿಕೊಂಡ ಕಾಂಗ್ರೆಸ್, ಅ ಂಬೇಡ್ಕರ್ ಅವರ ಹೆಸರನ್ನು ಸದಾ ರಾಜಕೀಯ ಉದ್ದೇಶಕ್ಕಾಗಿ ಬಳಸಿಕೊಳ್ಳುತ್ತಿದೆ. ಇದು ಮುಂದುವರಿದಿದೆ ಕೂಡಾ. ಆದರೆ, 2014ರಿಂದ ಈಚೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಬಳಿಕ ಅಂಬೇಡ್ಕರ್ ಅವರಿಗೆ ಸಂಬಂಧಿಸಿದ ಜನ್ಮಭೂಮಿ, ಶಿಕ್ಷಾ ಭೂಮಿ, ದೀಕ್ಷಾ ಭೂಮಿ, ಮಹಾಪರಿನಿರ್ವಾಣ ಭೂಮಿ ಹಾಗೂ ಚೈತ್ಯಭೂಮಿ ಈ ಐದು ಸ್ಥಳಗಳು ಯಾತ್ರಾ ಸ್ಥಳಗಳಾಗಿ ಮಾರ್ಪಾಡುಗುತ್ತಿವೆ. ಅಂಬೇಡ್ಕರ್ ಅವರ ಗೌರವಾರ್ಥವಾಗಿ ಈ ಐದು ಸ್ಥಳಗಳನ್ನು ಪಂಚತೀರ್ಥ ಯೋಜನೆಯಡಿ ಅಭಿವೃದ್ಧಿಪಡಿಸಲಾಗುತ್ತಿದೆ. ಹೀಗಾಗಿ, ದೇಶದ 30 ಕೋಟಿಗೂ ಅಧಿಕ ಜನಸಂಖ್ಯೆಯುಳ್ಳ ಪರಿಶಿಷ್ಟ ಜಾತಿಯ ಜನರಿಗೆ ನಂಬಿಕೆ ಇದೆ. ಶೀಘ್ರದಲ್ಲೇ ಅಯೋಧ್ಯೆಯ ರಾಮಮಂದಿರದಂತೆ ಪ್ರಧಾನಿ ನರೇಂದ್ರ ಮೋದಿಯವರು ಮುಂಬೈನ ಚೈತ್ಯಭೂಮಿಯಲ್ಲಿ ಭೀಮಮಂದಿರ ನಿರ್ಮಾಣವಾಗಬೇಕು. ಅಂತಹ ಅಮೃತ ಘಳಿಗೆ ಶೀಘ್ರವೇ ಒದಗಿಬರಲೆಂದು ಆಶಿಸುತ್ತೇನೆ.

ಅದರಂತೆ, ದೇಶ ಗಣರಾಜ್ಯವಾಗಿ ಅಮೃತ ಮಹೋತ್ಸವ ಆಚರಿಸಿಕೊಳ್ಳುವ ಹೊಸ್ತಿಲಲ್ಲಿದ್ದರೂ, ಅಂಬೇಡ್ಕರ್ ಅವರನ್ನು ಪರಿಪೂರ್ಣವಾಗಿ ತಿಳಿದುಕೊಳ್ಳುವ, ತಿಳಿಸಿಕೊಡುವ ಕಾರ್ಯವಾಗಿಲ್ಲ. ಜೊತೆಗೆ ಅವರನ್ನು ಕೇವಲ ಒಂದು ಜನಾಂಗೀಯ ವ್ಯಕ್ತಿಯನ್ನಾಗಿ ಕಾಣಲಾಗುತ್ತಿರುವುದು ಗುಟ್ಟಾಗೇನೂ ಉಳಿದಿಲ್ಲ. ಹೀಗಾಗಿ, ರಾಮನಾಮದಂತೆ ಭೀಮನಾಮವೂ ಪ್ರತಿಧ್ವನಿಸಬೇಕೆಂದರೆ ಭೀಮ ಮಂದಿರ ನಿರ್ಮಾಣ ವಾಗಬೇಕಿದೆ.

ಅಂಬೇಡ್ಕರ್ ಅವರ ಸಮಾಧಿ ಸ್ಥಳವಾಗಿರುವ ಮುಂಬೈನ ಚೈತ್ಯ ಭೂಮಿ ಪವಿತ್ರ ಸ್ಥಳವನ್ನಾಗಿಸಬೇಕಾದ ಹೊಣೆಗಾರಿಕೆ ದೇಶದ ಪ್ರತಿಯೊಬ್ಬ ಪ್ರಜೆಯದ್ದಾಗಿದೆ.

ಹಾಗಾಗಿ ಅಂಬೇಡ್ಕರ್ ಅನುಯಾಯಿಗಳು, ಬಸವಣ್ಣನ ಅನುಯಾಯಿಗಳು, ಬುದ್ಧನ ಅನುಯಾಯಿಗಳು ಸೇರಿದಂತೆ ದೇಶವಾಸಿಗಳೆಲ್ಲರೂ ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಿಸಿದಂತೆ, ಮಹಾರಾಷ್ಟ್ರದ ದಾದರ್‌ನಲ್ಲಿ ಭೀಮ ಮಂದಿರವನ್ನು ಸ್ಥಾಪಿಸುವಂತೆ ಸರ್ಕಾರಗಳಿಗೆ ಹಕ್ಕೊತ್ತಾಯ ಮಾಡೋಣ. ರಾಮಮಂದಿರಕ್ಕಾಗಿ ನಡೆಸಿದ ಆಂದೋಲನದಂತೆ, ಭೀಮಮಂದಿರಕ್ಕಾಗಿಯೂ ನಡೆಸೋಣ ಬನ್ನಿ..

# ಬರೋಡಾ ಬ್ಯಾಂಕ್‌ನಿಂದ ವ್ಹೀಲ್‌ಚೇರ್ ಕೊಡುಗೆ



**■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಗದಗ ನಗರದ ಬ್ಯಾಂಕ್ ಆಫ್ ಬರೋಡಾದ ಸೀನಿಯರ್ ಮ್ಯಾನೇಜರ್ ಮಹಮ್ಮದ ರಬ್ಬಾನಿ ಮತ್ತು ಅಸಿಸ್ಟಂಟ್ ಮ್ಯಾನೇಜರ್ ಶಿರಾಸ್ತ ಚಂದು ಇವರು ಬೆಟಗೇರಿಯ ಮಂಜು ಶಿಕ್ಷಣ ಸಂಸ್ಥೆಯ ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗೆ ಭೇಟಿ ನೀಡಿ, ಮಕ್ಕಳಿಗೆ ವೀಲ್‌ಚೇರ್ ಕೊಡುಗೆಯಾಗಿ ನೀಡಿದರು.

ಮಹಮ್ಮದ ರಬ್ಬಾನಿ ಶಾಲೆಯ ವಾತಾವರಣ, ಪರಿಸರ, ಸ್ವಚ್ಛತೆಯನ್ನು ನೋಡಿ ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಶಂಕರಸಿಂಗ ಎಸ್. ರಜಪೂತ ಮಾತನಾಡಿದರು. ಶಾಲೆಯ ಪ್ರಧಾನ ಗುರುಗಳಾದ ವಿರೇಂದ್ರಸಿಂಗ ರಜಪೂತ ಸರ್ವರನ್ನು ಸ್ವಾಗತಿಸಿದರು. ಸಹ ಶಿಕ್ಷಕ ವಿನಾಯಕಸಿಂಗ ರಜಪೂತ ಕಾರ್ಯಕ್ರಮ ನಿರೂಪಿಸಿದರು. ಎಂ.ಎಸ್. ಹೊಸೂರ ವಂದಿಸಿದರು.

ಶಿಕ್ಷಕರಾದ ಎನ್.ಆರ್. ಸಿನ್ನೂರ, ಎಚ್.ಟಿ. ಕೊಪ್ಪದ, ಐ.ಸಿ. ಪಲ್ಲೇದ, ಪ್ರಕಾಶ ದಿಗಿದಿಗಿ, ಆರ್.ಆರ್. ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

# ಸಚಿವ ಎಚ್.ಕೆ. ಪಾಟೀಲರಿಗೆ ಮನವಿ




**■ ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿ ಅನ್ನದಾನೀಶ್ವರ ಕಲ್ಯಾಣ ಮಂಟಪದಲ್ಲಿ ನಡೆದ ತಾಲೂಕಾ ಜನಸ್ಪಂದನದಲ್ಲಿ ಅದ್ವಿಕ್ ವಿವಿದೋದ್ದೇಶಗಳ ಅಭಿವೃದ್ಧಿ ಸಂಘದ ವತಿಯಿಂದ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ ಪಾಟೀಲರಿಗೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮನವಿ ಪತ್ರ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷ ಬಸವರಾಜ ಯಲ್ಲಪ್ಪ ನವಲಗುಂದ ಮಾತನಾಡಿ, ಗದಗ–ಹರಪನಹಳ್ಳಿ ರೈಲ್ವೆ ಮಾರ್ಗ, ಕೊಪ್ಪಳ–ಮುಂಡರಗಿ ರಾಷ್ಟ್ರೀಯ ಹೆದ್ದಾರಿ, ಮುಂಡರಗಿ ಪಟ್ಟಣದಲ್ಲಿ ಅಂಚೆ ಕಚೇರಿಯ ಜಾಗದಲ್ಲಿ ಕಟ್ಟಡ ನಿರ್ಮಾಣ, ಮುಂಡರಗಿ ತಾಲೂಕನ್ನು ವಿಧಾನಸಭಾ ಕ್ಷೇತ್ರ ಎಂದು ಘೋಷಿಸುವುದು, ಪಿಟಿಸಿಎಲ್ ಕಾಯ್ದೆ 1978 ಪುನರ್ ಸ್ಥಾಪನೆ, ಬಗರ್ ಹುಕುಂ ಹಕ್ಕು ಪತ್ರ ಹಂಚಿಕೆ, ಕಪ್ಪತ್ತಗಿರಿ ಸಂರಕ್ಷಣೆ ಇವೇ ಮುಂತಾದ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮನವಿ ಪತ್ರವನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ದೃವಕುಮಾರ ಹೂಗಾರ, ವ್ಹಿ.ಎಸ್. ಘಟ್ಟಿ ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಕೇರಂ ಪಂದ್ಯಾವಳಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಗದುಗಿನ ಪಂಚಾಕ್ಷರಿ ನಗರದಲ್ಲಿ ಶ್ರೀ ಪುಟ್ಟರಾಜ ಕೇರಂ ಕ್ಲಬ್ ವತಿಯಿಂದ ಜಿಲ್ಲಾ ಮಟ್ಟದ ಕೇರಂ ಸ್ಪರ್ಧೆ ಆಯೋಜಿಸಲಾಗಿತ್ತು. ಕೇರಂ ಸಿಂಗಲ್ಸ್‌ನಲ್ಲಿ ರಮೇಶ ಮುಂಡೇವಾಡಗಿ ಪ್ರಥಮ ಸ್ಥಾನ ಪಡೆದು 5001 ರೂ. ನಗದು ಬಹುಮಾನ ಹಾಗೂ ಟ್ರೋಫಿ ತಮ್ಮದಾಗಿಸಿಕೊಂಡರು.

ಸೋಮು ಅಂಗಡಿ ದ್ವಿತೀಯ ಸ್ಥಾನ ಪಡೆದು 2501 ರೂ. ನಗದು ಬಹುಮಾನ, ಟ್ರೋಫಿ ತಮ್ಮದಾಗಿಸಿಕೊಂಡರು. ಸ್ಪರ್ಧೆಯಲ್ಲಿ 50ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಿದ್ದರು. ಪ್ರಶಸ್ತಿಪತ್ರ ವಿತರಣಾ ಕಾರ್ಯಕ್ರಮದಲ್ಲಿ ವ್ಯಾಪಾರಸ್ಥರಾದ ಉಮರಸಾಬ ಕೌತಾಳ, ಗುತ್ತಿಗೆದಾರರಾದ ವೆಂಕಟೇಶ ಮಂಕನಿ, ಮಾಂಹತೇಶ ಮುಗಂಡಮಠ ಪಾಲ್ಗೊಂಡಿದ್ದರು. ಕ್ಲಬ್‌ನ ಪದಾಧಿಕಾರಿಗಳಾದ ಹರಿಶ್ ಕೊಪ್ಪರ, ಆರ್.ಸಿ. ಪಾಟೀಲ, ಪ್ರವೀಣ ಜಮಖಂಡಿ ಹಾಗೂ ಕ್ಲಬ್‌ನ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

# ಕಠಿಣ ಪರಿಶ್ರಮದಿಂದ ಉನ್ನತ ಗುರಿ ಸಾಧ್ಯ




■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿದ್ಯಾರ್ಥಿಗಳ ಸರ್ವತೋಮುಖ ವಿಕಾಸಕ್ಕೆ ಪಠ್ಯ ವಿಷಯ ಮಾತ್ರವಲ್ಲದೇ ಪಠ್ಯೇತರ ಕಲಿಕೆಯೂ ಅತ್ಯವಶ್ಯ. ಕಠಿಣ ಪರಿಶ್ರಮದೊಂದಿಗೆ ಉನ್ನತ ಗುರಿಯನ್ನು ಹೊಂದಿರಬೇಕು. ಆಗ ಸಾಮಾನ್ಯ ವ್ಯಕ್ತಿಯೂ ಉನ್ನತ ಸ್ಥಾನಕ್ಕೆ ಏರಬಹುದು ಎಂದು ಶಾಸಕ ಡಾ. ಚಂದ್ರು ಲಮಾಣಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಬಿ.ಸಿ.ಎನ್ ಪಾಲಿಟೆಕ್ನಿಕ್ ಕಾಲೇಜಿನ ಆವರಣದಲ್ಲಿ ವಡವಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಾರ್ಷಿಕ ಕ್ರೀಡಾಕೂಟವನ್ನು ಕ್ರೀಡಾ ಜ್ಯೋತಿ ಬೆಳಗಿಸುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು.

ಶಾಲಾ ಕಾಲೇಜುಗಳಲ್ಲಿ ಕ್ರೀಡೆ, ಕಲೆ, ಸಾಹಿತ್ಯ ಸೇರಿದಂತೆ ವಿವಿಧ ಆಯಾಮಗಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು. ಮಕ್ಕಳು ಶಿಕ್ಷಕರ ಮಾರ್ಗದರ್ಶನದಂತೆ ಎಲ್ಲ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಉತ್ತಮ ವ್ಯಕ್ತಿತ್ವ ರೂಪಿಸಿಕೊಂಡು ದೇಶಕ್ಕೆ ಉತ್ತಮ ಪ್ರಜೆಯಾಗಬೇಕು ಎಂದರು.

ದೈಹಿಕ ಶಿಕ್ಷಣಾಧಿಕಾರಿ ಎಂ.ಎಂ. ಹವಳದ ಮಾತನಾಡಿ, ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಎಲ್ಲ ಮಕ್ಕಳಿಗೂ ಉತ್ತಮ ಶಿಕ್ಷಣ ವ್ಯವಸ್ಥೆಯಿದ್ದು, ಶೈಕ್ಷಣಿಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿಯೂ ಶಾಲೆಯ ಮಕ್ಕಳು ಉತ್ತಮ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಮಕ್ಕಳಿಗೆ ಉತ್ತಮ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ವಿದ್ಯಾರ್ಥಿಗಳು ಆಸಕ್ತಿಯಿಂದ ಪಾಲ್ಗೊಳ್ಳಬೇಕು ಎಂದರು.

ಸಭೆಯ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಎನ್.ಸಿ.ಕೆ. ಪಾಟೀಲ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಗೊಜನೂರು ಮೊರಾರ್ಜಿ ಶಾಲೆಯ ಪ್ರಾಚಾರ್ಯ ಎನ್.ಕೆ. ಹತ್ತಿಕಾಳ, ಶಿಕ್ಷಕರಾದ ಎಸ್.ಬಿ. ಉಮಚಗಿ, ಆಯ್.ಎಸ್. ನವಲಿ, ಎನ್.ಜಿ. ಹೊತ್ತಿಕೋಟಿ, ಎಂ.ಆರ್. ನೂಲ್ವಿ ಮುಂತಾದವರಿದ್ದರು. ವಿದ್ಯಾರ್ಥಿಗಳಾದ ಭೂಮಿಕಾ ಹೂಗಾರ, ಶಶಿಕುಮಾರ ಜೋಗಿನ ನಿರೂಪಿಸಿದರು.

# ಮೌಢ್ಯಮುಕ್ತ ವೈಜ್ಞಾನಿಕ ಅಕಾಡೆಮಿ ಸ್ಥಾಪಿಸಲು ಮನವಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕರಲ್ಲಿ ಮೌಢ್ಯತೆಯನ್ನು ನಿವಾರಿಸಿ ವೈಜ್ಞಾನಿಕ ಮನೋಭಾವ ಬೆಳೆಸಲು ರಾಜ್ಯ ಸರ್ಕಾರದಿಂದ ಮೌಢ್ಯಮುಕ್ತ ವೈಜ್ಞಾನಿಕ ಅಕಾಡೆಮಿ ಸ್ಥಾಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಜಿಲ್ಲಾ ಘಟಕ ವತಿಯಿಂದ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಲಾಯಿತು.

ಜಿಲ್ಲಾಧ್ಯಕ್ಷ ವಿಜಯಕುಮಾರ ಬಣಕಾರ ಮಾತನಾಡಿ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ವತಿಯಿಂದ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸಮಿತಿಗಳನ್ನು ರಚಿಸಿ ಜನಸಾಮಾನ್ಯರು, ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ, ಮಾನವೀಯ ಮೌಲ್ಯ, ವೈಜ್ಞಾನಿಕ ಕೌಶಲ್ಯ ಬೆಳೆಸಲು ಶ್ರಮಿಸುತ್ತಿದೆ. ರಾಜ್ಯ ಸರ್ಕಾರವು ಮುಂಬರುವ ಬಜೆಟ್ ಮಂಡನೆಯಲ್ಲಿ ಪರಿಷತ್ತಿನ ಬೇಡಿಕೆಗಳಾದ ವೈಜ್ಞಾನಿಕ ಅಕಾಡೆಮಿ ಸ್ಥಾಪನೆ ಮಾಡುವುದು, ಪ್ರತಿ ವರ್ಷ ನಡೆಯುವ ವೈಜ್ಞಾನಿಕ ಸಮ್ಮೇಳನಕ್ಕೆ 1.5 ಕೋಟಿ ರೂ. ಅನುದಾನ ನೀಡುವದು, ವಿಜ್ಞಾನ ಸಿರಿ ಮಾಸಪತ್ರಿಕೆಯನ್ನು ಗ್ರಾಮ ಪಂಚಾಯಿತಿ ಶಾಲಾ-ಕಾಲೇಜು ಗ್ರಂಥಾಲಯಗಳಿಗೆ ಖರೀದಿಸಲು ಶಿಕ್ಷಣ ಇಲಾಖೆಗೆ ಆದೇಶಿಸುವುದು, ಕಲ್ಯಾಣ ಕರ್ನಾಟಕದಲ್ಲಿ ಮೌಢ್ಯ ನಿವಾರಣೆಗೆ ವೈಜ್ಞಾನಿಕ ವಿಶ್ವವಿದ್ಯಾಲಯ ಸ್ಥಾಪನೆ ಮಾಡುವುದು, ಶಾಲಾ-ಕಾಲೇಜು ಹಂತದ ಮಕ್ಕಳಲ್ಲಿ ವೈಜ್ಞಾನಿಕ ಜಾಗೃತಿ ಮೂಡಿಸಲು ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಹಯೋಗದಲ್ಲಿ ವೈಜ್ಞಾನಿಕ ಜಾಗೃತಿ ಜಾಥಾ ಮಾಡಲು ಅನುದಾನ ನೀಡಬೇಕೆಂದು ಅಪರ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಪರಿಷತ್ತಿನ ಗದಗ ಜಿಲ್ಲಾ ಪದಾಧಿಕಾರಿಗಳಾದ ಶಂಕರ ಕುಕನೂರ, ಸಿ.ಎಸ್. ಅರಸನಾಳ, ವೆಂಕಟೇಶ ಇಮರಾಪೂರ, ವೀರೇಶ ನೇಗಲಿ, ಕರಿಯಪ್ಪ ಶಿರಹಟ್ಟಿ, ಯಲ್ಲಪ್ಪ ಕರಡಿ, ಸೋಮನಗೌಡ ಪಾಟೀಲ, ರಾಮನಗೌಡ ಪಾಟೀಲ, ಗಂಗಾಧರ ಬಡಿಗೇರ, ಜಯಕುಮಾರ ಅಂಬಾಡಿಪುಡಿ, ಮುತ್ತು ಜಡಿ, ಡಾ. ಬಿ.ಎಸ್. ಮೇಟಿ ಮುಂತಾದವರು ಉಪಸ್ಥಿತರಿದ್ದರು.

### ಕರ್ನಾಟಕ ಏಕೀಕರಣ ಚಳುವಳಿ ವಿಚಾರ ಸಂಕಿರಣ

# ಐತಿಹಾಸಿಕ ದಾಖಲೆ, ಛಾಯಾಚಿತ್ರಗಳ ಪ್ರದಶನ ಫೆ.3ರಿಂದ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ -50, ಹಾಗೂ ಕರ್ನಾಟಕ ನಾಮಕರಣ 50 ರ ಮಹೋತ್ಸವ ಶ್ರೀ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಲಕೋಟಿ ಗದಗ ಇವರ ಸಹಯೋಗದಲ್ಲಿ ಕರ್ನಾಟಕ ಏಕೀಕರಣ ಚಳುವಳಿ ವಿಚಾರ ಸಂಕಿರಣ ಹಾಗೂ ಐತಿಹಾಸಿಕ ದಾಖಲೆಗಳ ಮತ್ತು ಛಾಯಾಚಿತ್ರಗಳ ಪ್ರದರ್ಶನದ ಸಮಾರಂಭವು ಫೆಬ್ರವರಿ 3, 4 ಮತ್ತು 5 ರಂದು ಹುಲಕೋಟಿಯ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಜರುಗಲಿವೆ.

ಹುಲಕೋಟಿ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಇತಿಹಾಸ ಪ್ರಾಧ್ಯಾಪಕರಾದ ಡಾ.ಅಪ್ಪಣ್ಣ ಎನ್ ಹಂಜೆ, ಪ್ರಾಚಾರ್ಯ ಡಾ.ಶಿವಪ್ಪ ಕುರಿ, ಧಾರವಾಡದ ಪ್ರಾದೇಶಿಕ ಪತ್ರಾಗಾರ ಕಚೇರಿ ಹಿರಿಯ ಸಹಾಯಕ ನಿರ್ದೇಶಕರಾದ ಮಂಜುಳಾ ಯಲಿಗಾರ ಸ್ವಾಗತ ಕೋರಿದ್ದಾರೆ.

**ಉದ್ಘಾಟನಾ ಸಮಾರಂಭ**

ಹುಲಕೋಟಿಯ ಸ್ವಾಮಿ ವಿವೇಕಾನಂದ ಪಿ.ಯು. ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ಫೆಬ್ರವರಿ 3 ರಂದು ಬೆಳಿಗ್ಗೆ 10.30 ಗಂಟೆಗೆ ಉದ್ಘಾಟನಾ ಸಮಾರಂಭ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ ತಂಗಡಗಿ ದಾಖಲೆಗಳ ಪ್ರದರ್ಶನ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಹುಲಕೋಟಿ ಗ್ರಾಮ ಪಂಚಾಯತ್ ಅಧ್ಯಕ್ಷ ಶ್ರೀಮತಿ ನಾಗರತ್ನ ಬಾಳಿಹಳ್ಳಿಮಠ, ಹುಲಕೋಟಿ ಗ್ರಾಮ ಪಂಚಾಯತ್ ಉಪಾಧ್ಯಕ್ಷ ಅಬ್ದುಲ್ ಕರೀಂಸಾಬ ತಹಸೀಲ್ದಾರ ಆಗಮಿಸುವರು.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ.ಎನ್. ಮಂಜುಳಾ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಆಯುಕ್ತರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಗದೀಶ್ ಜಿ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಹ ುಲಕ ೋಟಿಯ ಕೆ.ಎಚ್.ಪಾಟೀಲ ಸರಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯರಾದ ಡಾ.ಶಿವಪ್ಪ ಕುರಿ, ಧಾರವಾಡ ಪ್ರಾದೇಶಿಕ ಪತ್ರಾಗಾರ ಕಚೇರಿಯ ಹಿರಿಯ ಸಹಾಯಕ ನಿರ್ದೇಶಕ ಮಂಜುಳಾ ಯಲಿಗಾರ, ಕರ್ನಾಟಕ ರಾಜ್ಯ ಪತ್ರಾಗಾರ ನಿರ್ದೇಶನಾಲಯದ ನಿರ್ದೇಶಕ ಡಾ.ಗವಿಸಿದ್ದಯ್ಯ ಸ್ವಾಗತ ಕೋರಿದ್ದಾರೆ.

### ಡಂಬಳ ಹೋಬಳಿಯಲ್ಲಿ ಕಾಮಗಾರಿ ಗುದ್ದಲಿ ಪೂಜೆ, ಕಟ್ಟಡ ಉದ್ಘಾಟನೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಅನುದಾನಕ್ಕೆ ಯಾವುದೇ ಕೊರತೆ ಇಲ್ಲ



■ **ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ರಾಜ್ಯದಲ್ಲಿ ಬಿಜೆಪಿಗೆ ಸುಳ್ಳೇ ಬಂಡವಾಳವಾಗಿದೆ. ಅವರ ಸುಳ್ಳು ಮಾತುಗಳಿಗೆ ಬೆಲೆಯಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಅಭಿವೃದ್ಧಿ ವಿಚಾರದಲ್ಲಿ ಹಿಂದೆ ಬಿದ್ದಿಲ್ಲ. ಸರ್ಕಾರದಲ್ಲಿ ಅನುದಾನಕ್ಕೆ ಯಾವುದೇ ಕೊರತೆ ಇಲ್ಲ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಬರದೂರ ಗ್ರಾಮದಿಂದ ತಾಮ್ರಗುಂಡಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ 2 ಕೋಟಿ ರೂ ವೆಚ್ಚದ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ಮತ್ತು 13 ಲಕ್ಷ ರೂ ವೆಚ್ಚದ ವಿವೇಕ ಶಾಲಾ ಕೊಠಡಿ ಯೋಜನೆಯಡಿ ಪ್ರಾಥಮಿಕ ಶಾಲಾ ಕಟ್ಟಡ ಉದ್ಘಾಟಿಸಿ ಶಾಸಕರು ಮಾತನಾಡಿದರು.

ರಾಜ್ಯದಲ್ಲಿ ಬರದ ಕುರಿತು ಈಗಾಗಲೇ ಕೇಂದ್ರ ಸರಕಾರಕ್ಕೆ ಮನವರಿಕೆ ಮಾಡಿದರೂ ಸಹ ಕೇಂದ್ರ ಸರಕಾರ ಅನುದಾನ ನೀಡಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕೇಂದ್ರ ಸರಕಾರದಿಂದ ಎನ್‌ಡಿಆರ್‌ಎಫ್, ಅನುದಾನ ಬಿಡುಗಡೆಯಾಗಿಲ್ಲ. ಖುದ್ದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೈತರ, ಕೂಲಿಕಾರ್ಮಿಕರ ಹಿತಕ್ಕಾಗಿ ದೆಹಲಿಗೆ ತೆರಳಿ ಮನವಿ ಮಾಡಿದ್ದಾರೆ. ಅಲ್ಲದೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ಮೋದಿಯವರನ್ನು ಭೇಟಿಯಾಗಿ, ಬರ ಪರಿಹಾರ ನಿಧಿ ಬಿಡುಗಡೆಗೆ ಮಾಡುವಂತೆ ಮನವಿ ಮಾಡಿದ್ದರೂ ಇದುವರೆಗೂ ಹಣ ಬಿಡುಗಡೆ ಮಾಡಿಲ್ಲ ಎಂದು ಟೀಕಿಸಿದರು.

> ರಾಜ್ಯದ ಕಾಂಗ್ರೆಸ್ ಸರ್ಕಾರದಿಂದ ಅಭಿವೃದ್ಧಿ ಕೆಲಸಗಳು ಕೂಡಾ ನಿರಂತರವಾಗಿ ನಡೆಯುತ್ತಿದ್ದು, ಕುಡಿಯುವ ನೀರಿನ ಕೊರತೆ ಕಂಡುಬಂದಲ್ಲಿ ಕೊಳವೆ ಬಾವಿಗಳನ್ನು ಕೊರೆಸುವ ಮೂಲಕ ಗ್ರಾಮಗಳಲ್ಲಿ ನೀರಿನ ಕೊರತೆಯನ್ನು ನೀಗಿಸುತ್ತೇವೆ ಎಂದರಲ್ಲದೆ, ಕಾಂಗ್ರೆಸ್ ಪಕ್ಷ ಸದಾ ಎಲ್ಲರ ಹಿತಕ್ಕಾಗಿ, ಎಲ್ಲಾ ಜಾತಿ-ಜನಾಂಗದವರ ಹಿತ ಕಾಯುವ ಕೆಲಸ ಮಾಡುತ್ತಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ನರೇಗಾ ಯೋಜನೆಯಡಿ ಕೂಲಿಕಾರ್ಮಿಕರ ಹಿತಕ್ಕಾಗಿ 100ರಿಂದ 150ರವರೆಗೆ ಮಾನವ ದಿನಗಳನ್ನು ಹೆಚ್ಚಿಸಲಾಗಿದೆ. ಈಗಾಗಲೇ ಜಿಲ್ಲೆಯ ಎಲ್ಲ ತಾಲೂಕಿನ ರೈತರಿಗೆ ತಲಾ 2 ಸಾವಿರ ರೂ. ಬರ ಪರಿಹಾರ ಹಣ ಬಿಡುಗಡೆ ಮಾಡಿದ್ದು, ಬರ ಪರಿಹಾರ ನಿರ್ವಹಣೆಗೆ ಟಾಸ್ಕ್‌ಫೋರ್ಸ್ ಸಿದ್ಧವಿದೆ. ಅಗತ್ಯವಿರುವ ಹಣವೂ ಜಿಲ್ಲಾಧಿಕಾರಿಗಳ ಖಾತೆಯಲ್ಲಿದೆ. ಅಗತ್ಯ ಬಿದ್ದಲ್ಲಿ ತಕ್ಷಣ ಗೋಶಾಲೆಗಳನ್ನು ತೆರೆದು ಮೇವು ತರಿಸಿಕೊಳ್ಳುವ ಎಲ್ಲಾ ವ್ಯವಸ್ಥೆ ಮಾಡಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪುರಸಭೆ ಉಪಾಧ್ಯಕ್ಷ ಮಿಥುನ ಜಿ.ಪಾಟೀಲ್, ಗವಿಸಿದ್ದಯ್ಯ ಹಿರೇಮಠ, ಯಲ್ಲಪ್ಪಾ ಹುಲಗೇರಿ, ಗ್ರಾ.ಪಂ ಸದಸ್ಯರಾದ ಅಮರೇಶಶ ಹಿರೇಮಠ, ದೇವಪ್ಪ ಚಿಕ್ಕಣ್ಣವರ, ರವಿ ವಡ್ಡರ, ನಿಂಗಪ್ಪ ಕವಲೂರ, ಮೈಲಾರಪ್ಪ ಕವಲೂರ, ಬಸಪ್ಪ ರೇವಣ್ಣವರ, ಹಾಲಪ್ಪ ಮಾದರ, ಸೋಮಪ್ಪ ಹೈತಾಪುರ, ಬಸಪ್ಪ ಬಂಡಿ, ಪರಮೇಶಪ್ಪ ರೇವಣ್ಣವರ, ಮಹಾದೇವಪ್ಪ ರೇವಣ್ಣವರ, ಹನಮಪ್ಪ ಶಿರಹಟ್ಟಿ, ಮಂಜುನಾಥ ಬೂದಿಹಾಳ, ಪಿಡಬ್ಲುಡಿ ಕಾರ್ಯನಿರ್ವಾಹಕ ಅಭಿಯಂತರ ಎಮ್.ಎಸ್. ಪಾಟೀಲ್, ಸಹಾಯಕ ಇಂಜಿನಿಯರ್ ನಾಗೇಂದ್ರ ಪಟ್ಟಣಶೆಟ್ಟಿ ಮುಂತಾದವರಿದ್ದರು.

### ಕೆಎಸ್‌ಸಿಎ ಲೀಗ್ ಕ್ರಿಕೆಟ್‌ನ ಎರಡನೇ ಡಿವ್ಹಿಜನ್ ಲೀಗ್ ಟೂರ್ನಿಯಲ್ಲಿ ಸತತ 2ನೇ ಜಯ

# ಜಯಭೇರಿ ಬಾರಿಸಿದ ಜಾನೋಪಂತರ ಕ್ರಿಕೆಟ್ ಅಕಾಡೆಮಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಆದರ್ಶ ಮಾನುರೆ, ನವೀನಕುಮಾರರ ಆಕರ್ಷಕ ಬ್ಯಾಟಿಂಗ್ ಹಾಗೂ ಶಂಕರ ದೊಡ್ಡಕೆಂಚಣ್ಣವರರ ಅತ್ಯುತ್ತಮ ಆಲ್‌ರೌಂಡರ್ ಆಟದಿಂದಾಗಿ ನಗರದ ಜಾನೋಪಂತರ ಕ್ರಿಕೆಟ್ ಅಕಾಡೆಮಿ ತಂಡವು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಆಶ್ರಯದ ಎರಡನೇ ಡಿವ್ಹಿಜನ್ ಲೀಗ್ ಟೂರ್ನಿಯಲ್ಲಿ ಸತತ 2ನೇ ಜಯ ಸಾಧಿಸಿತು.

ಹುಬ್ಬಳ್ಳಿಯ ಕರ್ನಾಟಕ ಜಿಮಖಾನ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಗದಗ ತಂಡ ಬೆಳಗಾವಿಯ ತಂಡವನ್ನು ಬ್ಯಾಟಿಂಗ್‌ಗೆ ಆಹ್ವಾನಿಸಿತು. ಬೆಳಗಾವಿ ತಂಡದ ಪರ ಸಾಯಿರಾಜ ಸಾಳುಂಕೆ (64 ರನ್) ಮತ್ತು ಅಂಗದರಾಜ ಹಿತ್ತಲಮನಿ (69 ರನ್) ಅರ್ಧಶತಕ ಬಾರಿಸಿದರೆ, ಮಾಜೀದ ಮಕಾಂದಾರ (36 ರನ್) ಹಾಗೂ ನವೀನ ಶಿರಗಾವಿ ಬಾರಿಸಿದ 34 ರನ್‌ಗಳ ನೆರವಿನಿಂದಾಗಿ ನಿಗದಿತ 50 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 248 ರನ್‌ಗಳನ್ನು ಗಳಿಸಿತು. ಗದಗ ತಂಡದ ಪರ ಶಂಕರ ಎರಡು ವಿಕೆಟ್ ಪಡೆದರೆ, ಓಂಕಾರ ಕೇಸ್ತಿ, ಫೈರೋಜ ಸೌದಗಾರ ಹಾಗೂ ಆನಂದ ತಲಾ ಒಂದು ವಿಕೆಟ್ ಪಡೆದರು.

249 ರನ್‌ಗಳ ಗುರಿಯೊಂದಿಗೆ ಬ್ಯಾಟಿಂಗ್ ಪ್ರಾರಂಭಿಸಿದ ಜಾನೋಪಂತರ ಅಕಾಡೆಮಿ ತಂಡಕ್ಕೆ ಆರಂಭಿಕ ಬ್ಯಾಟರ್ ಆದರ್ಶ ಮಾನುರೆ (50 ಎಸತೆಗಳಲ್ಲಿ 9 ಬೌಂಡರಿ, 3 ಸಿಕ್ಸರ್ ಸಹಿತ 67 ರನ್) ಅರ್ಧಶತಕ ಗಳಿಸಿ, ತಂಡಕ್ಕೆ ಬಿರುಸಿನ ಪ್ರಾರಂಭ ನೀಡಿದರು. ಮಧ್ಯಮ ಕ್ರಮಾಂಕದಲ್ಲಿ ನವೀನಕುಮಾರ ಜವಾಬ್ದಾರಿಯುತ ಬ್ಯಾಟಿಂಗ ನಡೆಸಿ 76 ಎಸತೆಗಳಲ್ಲಿ 10 ಬೌಂಡರಿ ಸಹಿತ ಔಟಾಗದೇ 76 ರನ್ ಗಳಿಸಿ ಗದಗ ತಂಡದ ಜಯದ ರೂವಾರಿಯಾದರು.

> ಹಿರಿಯ ಆಟಗಾರ ಶಂಕರ ದೊಡ್ಡಕೆಂಚಣ್ಣವರ 29 ರನ್ ಗಳಿಸಿ, ಉತ್ತಮ ಬೆಂಬಲ ನೀಡಿದರು. ನವೀನಕುಮಾರ ಹಾಗೂ ಶಂಕರ 8ನೇ ವಿಕೆಟ್‌ಗೆ 65 ರನ್‌ಗಳ ಪಾಲುದಾರಿಕೆಯಲ್ಲಿ ಭಾಗಿಯಾದರು. ಕೊನೆಯಲ್ಲಿ ಅಜಯ ಶಿವಳ್ಳಿ ಸಿಕ್ಸರ್ ಬಾರಿಸಿ ಗದಗ ತಂಡಕ್ಕೆ ಜಯ ತಂದಿತ್ತರು. ಗದಗ ತಂಡ 46.4 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 253 ರನ್ ಗಳಿಸಿ 2 ವಿಕೆಟ್‌ಗಳ ಜಯ ಸಾಧಿಸಿತು. ಬೆಳಗಾವಿ ತಂಡದ ಪರ ಮಾಜೀದ ಮಕಾಂದಾರ, ಸ್ವರೂಪ ಸಾಳುಂಕೆ ಹಾಗೂ ನವೀನ ಶಿರಗಾವಿ ತಲಾ 2 ವಿಕೆಟ್ ಪಡೆದರು. ಈ ಜಯದಿಂದಾಗಿ ಗದಗ ತಂಡಕ್ಕೆ 4 ಅಂಕ ಲಭಿಸಿತು.

### ತೋಂಟದಾರ್ಯ ಇಂಜಿನೀಯರಿಂಗ್ ಕಾಲೇಜಿನಲ್ಲಿ ರಾಷ್ಟ್ರೀಯ ಶಹೀದ್ ದಿನಾಚರಣೆ

# ವೀರರ ಜೀವನ ಮಾರ್ಗದರ್ಶಿಯಾಗಲಿ




■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಭಗತ್ ಸಿಂಗ್, ರಾಜಗುರು, ಸುಖದೇವ್, ಲಾಲಾ ಲಜಪತ್ ರಾಯ್, ಚಂದ್ರಶೇಖರ್ ಅಜಾದ್, ರಾಣಿ ಲಕ್ಷ್ಮೀಬಾಯಿ, ಮಹಾತ್ಮಾ ಗಾಂಧಿ ಇವರೆಲ್ಲರೂ ನಮ್ಮ ಸ್ಫೂರ್ತಿ. ಅವರ ಶೌರ್ಯ, ದೃಢತೆ ನಮಗೆ ದಾರಿದೀಪವಾಗಿದ್ದು, ಸವಾಲುಗಳನ್ನು ಎದುರಿಸುವ ಶಕ್ತಿಯನ್ನು ನೀಡುತ್ತದೆ. ಅವರ ತ್ಯಾಗ, ಬಲಿದಾನಗಳು ನಮಗೆ ಪರಕೀಯರ ದಾಸ್ಯದಿಂದ ಸ್ವಾತಂತ್ರ್ಯವನ್ನು ತಂದುಕೊಟ್ಟವು. ಈ ವೀರರು ನಮಗೆಲ್ಲ ಮಾರ್ಗದರ್ಶನವಾಗಲಿ ಎಂದು ಪ್ರಾಂಶುಪಾಲ ಡಾ. ಎಂ.ಎಂ. ಅವಟಿ ನುಡಿದರು.

ಅವರು ನಗರದ ತೋಂಟ-ದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಭಾರತದ ವೀರ ಸುಪುತ್ರರನ್ನು ಸ್ಮರಿಸಿಕೊಳ್ಳುವ 'ರಾಷ್ಟ್ರೀಯ ಶಹೀದ್ ದಿನ' ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ನ್ನುದ್ದೇಶಿಸಿ ಮಾತನಾಡಿದರು.

ಪ್ರೊ. ಜಗದೀಶ ಶಿವನಗುತ್ತಿ ಮತ್ತು ಪ್ರೊ. ಸಂತೋಷಕುಮಾರ ಜಿ.ಎಮ್ ವಿದ್ಯಾರ್ಥಿಗಳಿಂದ 'ರಾಷ್ಟ್ರೀಯ ಶಹೀದ್ ದಿನ'ದ ಅಂಗವಾಗಿ ಜಾಥಾ ಏರ್ಪಡಿಸಿದ್ದರು.

ಇಲೆಕ್ಟ್ರಿಕಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಈರಣ್ಣ ಕೋರಚಗಾಂವ ಮಾತನಾಡಿ, ನಾವು ನಮ್ಮ ದೇಶವನ್ನು ಬಲಿಷ್ಠವಾಗಿಸಲು, ಸ್ವಾವಲಂಬಿಯಾಗಿಸಲು, ವಿಜ್ಞಾನ ಮತ್ತು ತಂತ್ರಜ್ಞಾನದ ಕ್ಷೇತ್ರದಲ್ಲಿ ಮುನ್ನಡೆಸಲು ಶ್ರಮಿಸಬೇಕು. ನಮ್ಮ ಶ್ರಮ, ಬುದ್ಧಿವಂತಿಕೆ, ಸೃಜನಶೀಲತೆಗಳ ಮೂಲಕ ನಾವು ರಾಷ್ಟ್ರಕ್ಕೆ ಕೊಡುಗೆ ನೀಡಬೇಕು. ನಮ್ಮ ಇಂಜಿನಿಯರಿಂಗ್ ಜ್ಞಾನವನ್ನು ದೇಶದ ಅಭಿವೃದ್ಧಿಗೆ ಬಳಸೋಣ. ತಿತಿನಮ್ಮ ಕಾರ್ಯಗಳ ಮೂಲಕ ನಮ್ಮ ಶಹೀದ್‌ಗಳಿಗೆ ಗೌರವ ಸಲ್ಲಿಸೋಣ ಎಂದರು.

ಕಾರ್ಯಕ್ರಮದಲ್ಲಿ ಪ್ರೊ. ಗೌತಮ ರೇವಣಕರ, ಪ್ರೊ. ದಯಾನಂದ ಗೌಡರ, ಪ್ರೊ. ಲೋಕೇಶ, ಪ್ರೊ. ಅಶ್ವಿನಿ ಅರಳಿ, ಪ್ರೊ. ಮಧುಸೂಧನ ಕುಲಕರ್ಣಿ, ಪ್ರೊ. ಶೈಲಜಾ ಮುದೇನಗುಡಿ, ಪ್ರೊ. ಆರ್.ವಿ. ಕಡಿ, ಪ್ರೊ. ಎಸ್.ಎಸ್. ಕಂದಗಲ್ಲ, ಪ್ರೊ. ಮಲ್ಲಿಕಾರ್ಜುನ ಜಿ.ಡಿ., ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ಸುನೀಲ ಪಾಟೀಲ, ಪ್ರೊ. ವೀರೇಶ ಮಾಗಳದ, ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ, ಪ್ರೊ. ಮೃತ್ಯುಂಜಯ ಹೂಗಾರ, ಪ್ರೊ. ಶಶಿಧರಗೌಡ ಮುಂತಾದವರಿದ್ದರು.

# ನಾಪತ್ತೆಯಾದ ಬಾಲಕನ ಪತ್ತೆಗೆ ಮನವಿ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೋಣ ತಾಲೂಕಿನ ನಾಗರಾಳ ಗ್ರಾಮದಿಂದ ಬಾಲಕನೋರ್ವ ನಾಪತ್ತೆಯಾಗಿದ್ದು, ಅಪಹರಣಕ್ಕೊಳಗಾಗಿರಬಹುದು ಎಂಬ ಶಂಕೆಯ ಮೇಲೆ ಪೋಷಕರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಫಿರ್ಯಾದಿದಾರನಾದ ನಾಗರಾಳದ ಕೃಷ್ಣಾಜೀ ಬಾಬುರಾವ್ ದೇಶಪಾಂಡೆ, ತಮ್ಮ ಅಣ್ಣನ ಮಗನಾದ ಅಜಯಕುಮಾರ ಬಲವಂತಕುಮಾರ ದೇಶಪಾಂಡೆ(13) ಇವನು ಸದ್ಯ ತಮ್ಮ ಆಶ್ರಯದಲ್ಲಿ ಇದ್ದು, ಜ.24ರಂದು ಮುಂಜಾನೆ 7 ಗಂಟೆ ಸುಮಾರಿಗೆ ನಾಗರಾಳ ಗ್ರಾಮದ ತಮ್ಮ ಮನೆಯಿಂದ ಹೊರಗಡೆ ಹೋದವನು ಮರಳಿ ಮನೆಗೆ ಬಾರದೇ ಎಲ್ಲಿಯೋ ಹೋಗಿ ಕಾಣೆಯಾಗಿದ್ದು, ಯಾರೋ ಯಾವುದೋ ಉದ್ದೇಶಕ್ಕಾಗಿ ಅಪಹರಣ ಮಾಡಿರಬಹುದು ಎಂದು ದೂರು ಸಲ್ಲಿಸಿದ್ದು, ನರೇಗಲ್ಲ ಪೊಲೀಸ್ ಠಾಣಾ ಗುನ್ನಾ ನಂ: 06/2024 ಕಲಂ: 363 ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.

ಅಪಹರಣಕ್ಕೊಳಗಾದ ಬಾಲಕನ ವಿವರ: ವಯಸ್ಸು-13 ವರ್ಷ 8 ತಿಂಗಳು, ಎತ್ತರ 4 ಪೂಟು 8 ಇಂಚು, ಶಿಕ್ಷಣ-8ನೇ ತರಗತಿ, ಚಹರೆ-ಮೈಯಿಂದ ತೆಳ್ಳಗೆ, ಸಾದಗೆಂಪು ಮೈಬಣ್ಣ, ಉದ್ದಮುಖ, ತಲೆಯಲ್ಲಿ ಕಪ್ಪು ಕೂದಲು, ಏರುಹಣೆ, ಡೊಣ್ಣಮೂಗು ಇದ್ದು ತಲೆಯಲ್ಲಿ 2 ಇಂಚು ಉದ್ದದ ಹಳೆಯ ಗಾಯದ ಕಲೆ ಇರುತ್ತದೆ. ಕಪ್ಪು ಬಣ್ಣದ ಪೂರ್ತಿ ತೋಳಿನ ಟಿಶರ್ಟ್, ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿರುತ್ತಾನೆ, ಕನ್ನಡ ಭಾಷೆ ಮಾತನಾಡುತ್ತಾನೆ.

ಈ ಮೇಲಿನ ಚಹರೆಯುಳ್ಳ ಬಾಲಕನ ಬಗ್ಗೆ ಮಾಹಿತಿ ದೊರೆತಲ್ಲಿ ಕೂಡಲೇ ನರೇಗಲ್ಲ ಪೊಲೀಸ್ ಠಾಣೆ, ಗದಗ ಕಂಟ್ರೋಲ್ ರೂಮ್: 9480804400, ಡಿಎಸ್‌ಪಿ ನರಗುಂದ ಉಪ ವಿಭಾಗ-9480804408, ಸಿಪಿಐ ರೋಣ-9480804434, ಪಿಎಸ್‌ಐ ನರೇಗಲ್ ಪೊಲೀಸ್ ಠಾಣೆ-08381-268233/9480804454 ಇಲ್ಲಿಗೆ ತಿಳಿಸುವಂತೆ ಕೋರಲಾಗಿದೆ.

**ಕರ್ನಾಟಕ ನೀರಾವರಿ ನಿಗಮ ನಿಯಮಿತ**
**(ಕರ್ನಾಟಕ ಸರ್ಕಾರದ ಉದ್ಯಮ)**
**ಕಾರ್ಯಪಾಲಕ ಅಭಿಯಂತರರವರ ಕಛೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಸಿಂಗಟಾಲೂರು ಏತ ನೀರಾವರಿ ಯೋಜನೆ, ವಿಭಾಗ ನಂ.1, ಮುಂಡರಗಿ, ಗದಗ ಜಿಲ್ಲೆ.**
**Ph. No. 08371-295016 e-mail: eeslis1mdg@gmail.com**

**ಅಲ್ಪಾವಧಿ ಟೆಂಡರ್ ಪ್ರಕಟಣೆ**
**(ONLY THROUGH "e-Procurement" SYSTEM)**

ಉಲ್ಲೇಖ: **(1)** ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ:1724/2023-24 ದಿನಾಂಕ: 25.01.2024 **(2)** ಈ ಕಛೇರಿ ಟೆಂಡರ್ ಪ್ರಕಟಣೆ ಪತ್ರ ಸಂಖ್ಯೆ:1725/2023-24 ದಿನಾಂಕ: 25.01.2024

ಸಿಂಗಟಾಲೂರು ಏತ ನೀರಾವರಿ ಯೋಜನೆ ಮುಂಡರಗಿ ವಿಭಾಗ-01 ಕಛೇರಿವತಿಯಿಂದ ಶಿರಹಟ್ಟಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಮುಕ್ತಿ ಮಂದಿರದ ಅಭಿವೃದ್ಧಿ ಕಾಮಗಾರಿಗೆ ಉಲ್ಲೇಖ(1)ರನ್ವಯ ಹಾಗೂ ಸೋಮೇಶ್ವರ ಕೆರೆ ಹಾಗೂ ಮುಕ್ತಿ ಮಂದಿರದ ಸುತ್ತ-ಮುತ್ತಲಿನ ಪ್ರದೇಶವನ್ನು ಅಭಿವೃದ್ಧಿಪಡಿಸುವ ಕಾಮಗಾರಿಗೆ ಅಂದಾಜು ಪಟ್ಟಿಯನ್ನು ತಯಾರಿಸಲು ಕನ್ಸಲ್ಟೆನ್ಸಿ ಸೇವೆ ಪಡೆಯಲು ಉಲ್ಲೇಖ(2)ರನ್ವಯ ದ್ವಿ-ಲಕೋಟೆ ಪದ್ಧತಿಯಲ್ಲಿ ಅಲ್ಪಾವಧಿ ಟೆಂಡರನ್ನು ಆಹ್ವಾನಿಸಲಾಗಿದೆ. ಸದರಿ ಟೆಂಡರ್‌ಗಳು e-Portal ನಲ್ಲಿ **Indent No. 684** ಮತ್ತು **685** ಹೊಂದಿದ್ದು, ಪ್ರಕಟಣೆಗಳಲ್ಲಿ ಸೂಚಿಸಿರುವಂತೆ, ಅರ್ಹ ಗುತ್ತಿಗೆದಾರರು ಟೆಂಡರ್‌ಗಳನ್ನು ಸಲ್ಲಿಸಬಹುದಾಗಿದೆ. ಸದರಿ ಟೆಂಡರ್‌ಗಳ ಮೊತ್ತವು (ಜಿ.ಎಸ್.ಟಿ. ಸೇರಿ) **ರೂ. 49.31 ಲಕ್ಷ** ಮತ್ತು **ರೂ.49.97 ಲಕ್ಷಗಳು ಇದ್ದು, ಅವುಗಳ ಇ.ಎಂ.ಡಿ. ಮೊತ್ತವು ರೂ. 0.99 ಲಕ್ಷ** ಮತ್ತು **ರೂ.1.00 ಲಕ್ಷಗಳು** ಆಗಿರುತ್ತವೆ.

ಇನ್ನುಳಿದಂತೆ, ಸದರಿ ಟೆಂಡರಿಗಳಿಗೆ ಸಂಬಂಧಿಸಿದ ಷರತ್ತು/ನಿಯಮಾವಳಿಗಳ ಮಾಹಿತಿಯನ್ನು ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ ಹಾಗೂ ದಿನಾಂಕ:25.01.2024ರ ನಂತರ "https://kppp.karnataka.gov.in", ವೆಬ್‌ಸೈಟ್‌ನಲ್ಲಿ ಟೆಂಡರ್ ಡಾಕ್ಯೂಮೆಂಟ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಬಿಡ್‌ನ್ನು ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಗಳ ಟೆಂಡರ್‌ಗಳಿಗೆ ಬಿಡ್ಡನ್ನು ಸಲ್ಲಿಸಲು ಕೊನೆಯ ದಿನಾಂಕ:06.02.2024 ಎಂದು ಮತ್ತು ಟೆಂಡರ್‌ಗಳ ತಾಂತ್ರಿಕ ಬಿಡ್ಡನ್ನು ತೆರೆಯುವ ದಿನಾಂಕ:08.02.2024 ಎಂದು ನಿಗದಿಪಡಿಸಲಾಗಿದೆ. ಇನ್ನಿತರೆ ಹೆಚ್ಚಿನ ಮಾಹಿತಿಯನ್ನು **e-procurement Helpdesk Phone No's: +91-80-46010000, +91-80-68948777** ಸಂಪರ್ಕಿಸಿ ಪಡೆಯಬಹುದಾಗಿದೆ. ನಿಬಂಧನೆಗೊಳಪಟ್ಟ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು. ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರ ಪಡೆದಿರುವ ಅಧಿಕಾರಿಯು ಎಲ್ಲಾ ಅಥವಾ ಯಾವುದೇ ಟೆಂಡರ್‌ನ್ನು ಕಾರಣ ನೀಡದೆ ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಸಿಂಗಟಾಲೂರು ಏತ ನೀರಾವರಿ ಯೋಜನೆ,**
**ನಂ. 1 ವಿಭಾಗ, ಕರ್ನಾಟಕ ನೀರಾವರಿ ನಿಗಮ ನಿಯಮಿತ,**
**ಮುಂಡರಗಿ, ಗದಗ ಜಿಲ್ಲೆ.**

ವಾ.ಸಾ.ಇ/ಗದಗ/497/2023-24/ದೇಶಪಾಂಡೆಪಬ್ಲಿಸಿಟಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka